# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 149

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಗುರುವಾರ: 21-05-2026


## ಹಲವೆಡೆ ಭಾರೀ ಮಳೆ: ಹವಾಮಾನ ಇಲಾಖೆ ಎಚ್ಚರಿಕೆ

**ಬೆಂಗಳೂರು,ಮೇ.20–** ಮುಂದಿನ 7 ದಿನಗಳವರೆಗೆ ರಾಜ್ಯಾದ್ಯಂತ ಗುಡುಗು, ಮಿಂಚು ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಮೇ 20 ರಿಂದ 26 ರವರೆಗೆ ರಾಜ್ಯದ ಹೆಚ್ಚಿನ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಉತ್ತರ ಒಳನಾಡಿನ ಜಿಲ್ಲೆಗಳಾದ ಧಾರವಾಡ, ಬೆಳಗಾವಿ, ಗದಗ, ಹಾವೇರಿ ಮತ್ತು ಬಾಗಲಕೋಟೆಯ ಕೆಲವು ಸ್ಥಳಗಳಲ್ಲಿ ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಚಿಕ್ಕಮಗಳೂರು, ಹಾಸನ, ಕೊಡಗು, ಮಂಡ್ಯ ಮತ್ತು ಮೈಸೂರಿನ ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

ಯಾದಗಿರಿ, ವಿಜಯಪುರ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳನ್ನು ಹೊರತುಪಡಿಸಿ, ರಾಜ್ಯದ ಉಳಿದ ಎಲ್ಲಾ ಜಿಲ್ಲೆಗಳಿಗೆ ಬುಧವಾರ ಹಳದಿ ಎಚ್ಚರಿಕೆ ನೀಡಲಾಗಿದೆ.

ಅದೇ ರೀತಿ, ಉತ್ತರ ಒಳನಾಡಿನ ಜಿಲ್ಲೆಗಳಾದ ಧಾರವಾಡ,



ಬೆಳಗಾವಿ, ಗದಗ, ಹಾವೇರಿ ಮತ್ತು ಬಾಗಲಕೋಟೆಯಲ್ಲಿ ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ ಮತ್ತು ಕೆಲವು ಸ್ಥಳಗಳಲ್ಲಿ ಮಧ್ಯಮ ಮಳೆಯಾಗುವ ಸಾಧ್ಯತೆ ಇದೆ.

ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದ್ದು, ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಕೊಡಗು, ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದ್ದು, ಕೆಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ಚಾಮರಾಜನಗರ, ರಾಮನಗರ, ಬಳ್ಳಾರಿ, ವಿಜಯನಗರ, ಶಿವಮೊಗ್ಗ, ದಾವಣಗೆರೆ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಕೋಲಾರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದ್ದು, ಕೆಲವು ಸ್ಥಳಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

ಉಡುಪಿ, ಉತ್ತರ ಕನ್ನಡ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ ಕರಾವಳಿ ಜಿಲ್ಲೆಗಳಲ್ಲಿ ಗಂಟೆಗೆ 30–40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ. ಮೇ 24 ರಿಂದ ರಾಜ್ಯಾದ್ಯಂತ ಗಾಳಿಯ ವೇಗ ಕಡಿಮೆಯಾಗಲಿದ್ದು, ತಗ್ಗು ಪ್ರದೇಶಗಳಲ್ಲಿ ಮಳೆ ಮುಂದುವರಿಯಲಿದೆ ಎಂದು ಹೇಳಲಾಗುತ್ತಿದೆ.

## ಆನ್ ಲೈನ್ ಔಷಾಧಿ ಮಾರಾಟ ವಿರೋಧಿಸಿ ಮನವಿ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಮಾನ್ವಿ ತಾಲೂಕು ಔಷದ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಆನ್ ಲೈನ್ ಔಷಾಧಿ ಮಾರಾಟ ವಿರೋಧಿಸಿ ತಹಶೀಲ್ದಾರ್ ರವರಿಗೆ ಉಪತಹಶೀಲ್ದಾರ್ ಡಿ.ವಾನಿತ ರವರ ಮೂಲಕ ಮನವಿ ಸಲ್ಲಿಸಿ ತಾಲೂಕು ಔಷದ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷರಾದ ಜಿ.ರಾಮಾಂಜನೇಯ್ಯ ಶೆಟ್ಟಿ ಮಾತನಾಡಿ ದೇಶದಲ್ಲಿ ಆನ್ ಲೈನ್ ಔಷಾಧಿ ಮಾರಾಟದಿಂದಾಗಿ ಸ್ಥಳಿಯ ಔಷಾಧಿ ವ್ಯಾಪಾರಿಗಳಿಗೆ ಹೆಚ್ಚಿನ ತೊಂದರೆಯಾಗುತ್ತಿರುವುದರಿಂದ ರಾಷ್ಟ್ರ ಮತ್ತು ರಾಜ್ಯ ಔಷದ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮೇ.20ರಂದು ಎಲ್ಲಾ ಔಷಾಧಿ ಅಂಗಡಿಗಳನ್ನು ಮುಚ್ಚಿ ಪ್ರತಿಭಟನೆ ನಡೆಸಲಾಗುತ್ತಿದೆ ಆನ್ ಲೈನ್ ಔಷಾಧಿ ಮಾರಾಟಗರಾರು ಹಾಗೂ ಇ.ಫಾರ್ಮಾಸಿ ವೇದಿಕೆಯ ಮೂಲಕ ಗ್ರಾಹಕರಿಗೆ ಔಷಾಧಿಗಳ ಮೇಲೆ ಹೆಚ್ಚಿನ ರಿಯಾಯಿತಿ ನೀಡುತ್ತಿರುವುದು. ಹಾಗೂ ನಕಲಿ ಔಷಾಧಿ ಚೀಟಿಗಳ ಬಳಕೆ ಹೆಚ್ಚಾಗಿದು ಅಂಟಿಬಯೋಟಿಕ್ ಹಾಗೂ ವ್ಯಸನಕಾರಿ ಔಷಾಧಿಗಳ ದುರುಪಯೋಗವಾಗುತ್ತಿದೆ ಹಾಗೂ ಜನರ ಆರೋಗ್ಯದ ಮೇಲೆ ಗಂಭಿರವಾದ ಪರಿಣಾಮಗಳಾಗುತ್ತಿರುವುದರಿಂದ ದೇಶದ ಪ್ರಧಾನಿಗಳು,ಕೇಂದ್ರ ಆರೋಗ್ಯ ಸಚಿವರು ಹಾಗೂ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ರಾಜ್ಯ ಆರೋಗ್ಯ ಸಚಿವರು ಆನ್ ಲೈನ್ ಔಷಾಧಿ ಮಾರಾಟಗರಾರು ಹಾಗೂ ಇ.ಫಾರ್ಮಾಸಿ ವೇದಿಕೆಯ ಮೂಲಕ ಔಷಾಧಿಗಳ ಮಾರಾಟಕ್ಕೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದರು.

ಬಸವ ವೃತ್ತದಿಂದ ತಹಶೀಲ್ದಾರ್ ಕಚೇರಿವರೆಗೆ ತಾಲೂಕು ಔಷದ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಪ್ರತಿಭಟನೆ ಮೆರವಣಿಗೆ ಮೂಲಕ ಮನವಿ ಸಲ್ಲಿಸಲಾಯಿತು. ಮಾನ್ವಿ ಪಟ್ಟಣ ಹಾಗೂ ತಾಲೂಕಿನ ವಿವಿಧ ಗ್ರಾಮಗಳಲ್ಲಿನ ಔಷಾಧಿ ಅಂಗಡಿಗಳನ್ನು ಮುಚ್ಚಿ ಪ್ರತಿಭಟನೆ ನಡೆಸಲಾಯಿತು. ತಾಲೂಕು ಔಷದ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ ತಾ.ಕಾರ್ಯದರ್ಶಿ ಭಿಮಣ್ಣ ಮುದಗಲ್, ದೇವೇಣದ್ರ ದುರ್ಗದ,ಶ್ರೀನಿವಾಸ ಬೋನಸಿ,ಎಂ.ಕೇಶವಯ್ಯಶೆಟ್ಟಿ, ಶರಣಪ್ಪ, ಪ್ರಕಾಶಗೌಡ, ರಾಜು ಬಾಸುತ್ಕರ್,ದೇವಯ್ಯಶೆಟ್ಟಿ, ಪುರುಷೋತ್ತಮ,ನಾಗರಾಜ,ಯೂನೂಸ್,ಗುರುರಾಜ,ವಿಶ್ವನಾಥ, ಸೇರಿದಂತೆ ಇನ್ನಿತರರು ಇದ್ದರು.

## ಸಿರವಾರ: ಫಿರ್ದೋಸ್ ಖಬರಸ್ತಾನ್ ಜಾಗದಲ್ಲಿ ವಾಣಿಜ್ಯ ಮಳಿಗೆ ನಿರ್ಮಾಣ; ಸಿಗುತ್ತಿರುವ ಮೃತದೇಹಗಳ ಮೂಳೆಗಳು, ಸಾರ್ವಜನಿಕರ ತೀವ್ರ ಆಕ್ರೋಶ

ಧೈರ್ಯದ ದಾರಿ


**ಸಿರವಾರ:** ಇಲ್ಲಿನ ಪವಿತ್ರ ಫಿರ್ದೋಸ್ ಖಬರಸ್ತಾನ್ (ಸ್ಮಶಾನ) ಜಾಗದ ಸಂರಕ್ಷಣೆಗಾಗಿ ಮುಸ್ಲಿಂ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹತ್ತಾರು ಬಾರಿ ಮನವಿ ಪತ್ರಗಳನ್ನು ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಸ್ಥಳೀಯರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಖಬರಸ್ತಾನ್ ಜಾಗದಲ್ಲಿ ನಿಯಮಬಾಹಿರವಾಗಿ ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿದ್ದರೂ ಜಿಲ್ಲಾ ವಕ್ಫ್ ಅಧಿಕಾರಿಗಳು ಇತ್ತ ಗಮನ ಹರಿಸದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಕಾಮಗಾರಿ ವೇಳೆ ಪತ್ತೆಯಾದ ಅಸ್ಥಿಪಂಜರಗಳು!

ಖಬರಸ್ತಾನ್‌ಗೆ ಸೇರಿದ ಜಾಗದಲ್ಲಿ ಹೊಸದಾಗಿ ವಾಣಿಜ್ಯ ಅಂಗಡಿ ಮುಂಗಟ್ಟುಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಈ ಕಾಮಗಾರಿಗಾಗಿ ಲೇಬರ್ ಮೂಲಕ ಗುಂಡಿ ತೋಡುವಾಗ ಮೃತದೇಹಗಳ ಮೂಳೆಗಳು ಹಾಗೂ ಅಸ್ಥಿಪಂಜರಗಳು ಸಾಲಾಗಿ ಸಿಗುತ್ತಿರುವುದು ಸಾರ್ವಜನಿಕರ ತೀವ್ರ ಆತಂಕ ಮತ್ತು ಭಾವನಾತ್ಮಕ ನೋವಿಗೆ ಕಾರಣವಾಗಿದೆ. ಧಾರ್ಮಿಕ ವಿಧಿವಿಧಾನಗಳ ಮುಖಾಂತರ ದಫನ್ ಮಾಡಲಾದ ಜಾಗದಲ್ಲಿ ಈ ರೀತಿ





ಅಗೆಯುತ್ತಿರುವುದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಅಧಿಕಾರಿಗಳ ಧೋರಣೆಗೆ ಸಾರ್ವಜನಿಕರ ಬೇಸರ

ಮುಸ್ಲಿಂ ಸಮಾಜದ ವತಿಯಿಂದ ಈ ಹಿಂದೆಯೇ ಸಂಬಂಧಪಟ್ಟ ಅಧಿಕಾರಿಗಳಿಗೆ ಅನೇಕ ಬಾರಿ ಲಿಖಿತ ಮನವಿಗಳನ್ನು ನೀಡಿ, ಸ್ಮಶಾನದ ಜಾಗ ಒತ್ತುವರಿಯಾಗುತ್ತಿರುವುದನ್ನು ತಡೆಯಲು ಕೋರಲಾಗಿತ್ತು. ಆದರೆ, ಅಧಿಕಾರಿಗಳು ಯಾವುದೇ ಸೂಕ್ತ ಕ್ರಮ ಕೈಗೊಳ್ಳದ ಕಾರಣ ಇಂದು ಇಂತಹ ದುಸ್ಥಿತಿ ನಿರ್ಮಾಣವಾಗಿದೆ ಎಂದು ಸ್ಥಳೀಯರು ದೂರಿದ್ದಾರೆ.

ಸಾರ್ವಜನಿಕರ ಪ್ರಮುಖ ಆಗ್ರಹಗಳು:

ತಕ್ಷಣದ ತನಿಖೆ: ಜಿಲ್ಲಾ ವಕ್ಫ್ ಅಧಿಕಾರಿಗಳು ತಕ್ಷಣವೇ ಸಿರವಾರದ ಫಿರ್ದೋಸ್ ಖಬರಸ್ತಾನ್‌ಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಬೇಕು.

ಕಾಮಗಾರಿ ಸ್ಥಗಿತ: ಪವಿತ್ರವಾದ ಸ್ಮಶಾನ ಭೂಮಿಯ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುತ್ತಿರುವ ಹೊಸ ಅಂಗಡಿಗಳ ನಿರ್ಮಾಣ ಕಾಮಗಾರಿಯನ್ನು ತಕ್ಷಣವೇ ಸ್ಥಗಿತಗೊಳಿಸಬೇಕು.

ನ್ಯಾಯಕ್ಕೆ ಆಗ್ರಹ: ಸಾರ್ವಜನಿಕರ ಮತ್ತು ಮುಸ್ಲಿಂ ಸಮಾಜದ ಅಹವಾಲುಗಳನ್ನು ಆಲಿಸಿ, ಸ್ಮಶಾನದ ಜಾಗವನ್ನು ಸಂರಕ್ಷಿಸಿ ಒತ್ತುವರಿದಾರರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಕಾರ್ಮಿಕರ ಹಕ್ಕುಗಳ ರಕ್ಷಣೆಗೆ ಸಂಘದಿಂದ ನಿರಂತರ ಹೋರಾಟ : ಮೈತ್ರೇಯಿ ಕೃಷ್ಣನ್

ಧೈರ್ಯದ ದಾರಿ





**ಮಾನ್ವಿ:** ಪಟ್ಟಣದ ನೀರಾವರಿ ಕಚೇರಿಯ ಹತ್ತಿರ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ ಎಐಸಿಸಿಟಿಯು ಸಂಯೋಜಿತ ವತಿಯಿಂದ ಮಾನ್ವಿ ಉಪ ವಿಭಾಗದ ನೂತನ ನಾಮಫಲಕವನ್ನು ಎಐಸಿಸಿಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಮೈತ್ರೇಯಿಕೃಷ್ಣನ್ ಅನಾವರಣಗೊಳಿಸಿ ಮಾತನಾಡಿ ತುಂಗಭದ್ರಾ ನೀರಾವರಿ ಯೋಜನೆಯಲ್ಲಿ ದುಡಿಯುತ್ತಿರುವ ಕಾರ್ಮಿಕರ ಹಕ್ಕುಗಳ ರಕ್ಷಣೆ, ಉದ್ಯೋಗ ಭದ್ರತೆ, ವೇತನ ಸಮಸ್ಯೆಗಳ ಪರಿಹಾರ ಹಾಗೂ ಕಾರ್ಮಿಕರ ಏಕತೆಗಾಗಿ ಸಂಘ ನಿರಂತರ ಹೋರಾಟ ನಡೆಸಿಕೊಂಡು ಬರುತ್ತಿದೆ ತುಂಗಭದ್ರಾ ನೀರಾವರಿ ಕಾರ್ಮಿಕರ ನ್ಯಾಯಯುತವಾದ ಹಲವು ಸಮಸ್ಯೆಗಳಿಗೆ ಸರ್ಕಾರ ಹಾಗೂ ಇಲಾಖೆಯ ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕ್ಕಾಗಿದೆ ಎಂದು ತಿಳಿಸಿದರು.

ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಕೇಂದ್ರ ಸಮಿತಿ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ ಮಾತನಾಡಿ, ಕಾರ್ಮಿಕರ ಸಂಘಟಿತ ಹೋರಾಟದಿಂದ ಮಾತ್ರ ಹಕ್ಕುಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ರಾಜ್ಯ ಸಹ ಕಾರ್ಯದರ್ಶಿ ನಾಗರಾಜ ಪೂಜಾರ್ , ಎಐಸಿಸಿಟಿಯು ಜಿಲ್ಲಾಧ್ಯಕ್ಷರಾದ ಅಜೀಜ್ ಜಾಗೀದಾರ್, ಸಿರಿವಾರ ವಿಭಾಗದ ಅಧ್ಯಕ್ಷ ರಾಜಾಸಾಬ್, ಈಶಪ್ಪ ಗೌಡ ,ಮಾನ್ವಿ ಉಪ ವಿಭಾಗದ ಅಧ್ಯಕ್ಷ ಬಸಲಿಂಗಪ್ಪ, ಜಲೀಲ್ ಪಾಷ, ಗೋಪಾಲರಾವ್, ರಂಗಪ್ಪ, ಹನುಮಂತನಾಯಕ, ಇಮ್ರಾನ್, ಚಂದ್ರಶೇಖರ್, ಶಿವಣ್ಣ ಸೇರಿದಂತೆ ಇನ್ನಿತರರು ಇದ್ದರು.

## "ರಸಗೊಬ್ಬರ ಕೊರತೆ ನಿಗಿಸಲು ರೈತ ಸಂಘ ಒತ್ತಾಯ"

ಧೈರ್ಯದ ದಾರಿ



**ರಾಯಚೂರು –:** ರಾಜ್ಯದಲ್ಲಿ 38 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಹಾಗೂ 14 ಸಾವಿರ ಟನ್ ಯೂರಿಯಾ ಕೊರತೆ ಇದೆ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಹೇಳಿರುವುದು ಆತಂಕಕಾರಿ ವಿಷಯವಾಗಿದ್ದು, ಇದು ಕೃಷಿ ಚಟುವಟಿಗಳ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ' ಎಂದು ಕರ್ನಾಟಕ ರಾಜ್ಯ ರೈತ ಸಂಘದ ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲ ಹೇಳಿದರು.


'ಇನ್ನೂ ಮುಂಗಾರು ಆರಂಭ ವಾಗಿಲ್ಲ. ಈಗಲೇ ಇಷ್ಟು ಸಮಸ್ಯೆ ಇದ್ದರೆ, ಕೃಷಿ ಚಟುವಟಿಕೆಗಳು ಆರಂಭವಾದಾಗ ಸಮಸ್ಯೆ ಇನ್ನಷ್ಟು ಹೆಚ್ಚಲಿದೆ' ಎಂದು ಮಂಗಳವಾರ ಮಾಧ್ಯಮಗೋಷ್ಠಿಯಲ್ಲಿ ಆತಂಕ ವ್ಯಕ್ತಪಡಿಸಿದರು.

'ಡಿಎಪಿ ಮತ್ತು ಯೂರಿಯಾ ಗೊಬ್ಬರದ ಬೆಲೆ ಸ್ಥಿರವಾಗಿದ್ದರೂ, ಇತರ ಗೊಬ್ಬರಗಳ ಬೆಲೆ ಹೆಚ್ಚಳವಾಗಿದೆ. ಇದರಿಂದ ರಸಗೊಬ್ಬರ ಕಳ್ಳ ಮಾರ್ಗದಿಂದ ಮಾರಾಟವಾಗುವ ಸಾಧ್ಯತೆಗಳಿವೆ. ರಾಜ್ಯ ಸರ್ಕಾರ ಎಷ್ಟೇ ಕಠಿಣ ನಿಯಮ ರೂಪಿಸಿದರೂ ನಿಯಂತ್ರಣ ಸಾಧ್ಯವಾಗುತ್ತಿಲ್ಲ. ಜಿಲ್ಲೆಯಲ್ಲಿ ಕೃಷಿ ಅಧಿಕಾರಿಗಳು ಕ್ರಮ ಕೈಗೊಳ್ಳುವಲ್ಲಿ ವಿಫಲರಾಗಿದ್ದಾರೆ' ಎಂದು ದೂರಿದರು.

'ಸರ್ಕಾರದ ದಾಖಲೆಗಳಲ್ಲಿ ರೈತರ ಭೂಮಿಯ 2ನೇಪುಟಕ್ಕೆ

## ಹೀಗೊಬ್ಬ ಪ್ರಾಣಿಪ್ರಿಯ ಮಾನ್ವಿಯಲ್ಲಿ

ಧೈರ್ಯದ ದಾರಿ




**ಮಾನ್ವಿ, ಮೇ 20:** ಇತ್ತೀಚಿನ ದಿನಗಳಲ್ಲಿ ಬೀದಿ ನಾಯಿಗಳಿಗೆ ವಿಷ ಹಾಕುವುದು, ವಾಹನಗಳಿಂದ ಗುದ್ದಿ ಸಾಯಿಸುವಂ ತಹ ಅಮಾನವೀಯ ಘಟನೆಗಳು ಹೆಚ್ಚುತ್ತಿರುವ ನಡುವೆಯೇ, ಮಾನ್ವಿ ಪಟ್ಟಣದ ಐಬಿ ಸಮೀಪದ "ಬ್ಯಾಟರಿ ಶೀನು" ಅವರು ಮೂಕ ಪ್ರಾಣಿಗಳ ಪಾಲಿಗೆ ಆಶ್ರಯದಾತರಾಗಿದ್ದಾರೆ.

ತಮ್ಮ ಅಂಗಡಿ ಸುತ್ತಮುತ್ತ ಹಾಗೂ ಮನೆಯ ಬಳಿಯಲ್ಲಿರುವ ಅನೇಕ ಬೀದಿ ನಾಯಿಗಳಿಗೆ ಪ್ರತಿದಿನ ಆಹಾರ ನೀಡಿ, ರಕ್ಷಣೆ ಒದಗಿಸುವ ಮೂಲಕ ಶೀನು ಅವರು ಮಾನವೀಯತೆ ಮೆರೆದಿದ್ದಾರೆ. ಅವರ ಅಂಗಡಿಗೆ ಬರುವ ಗ್ರಾಹಕರಿಗೂ ಈ ಶ್ವಾನಗಳಿಂದ ಯಾವುದೇ ತೊಂದರೆ ಆಗದಿರುವುದು ವಿಶೇಷವಾಗಿದೆ.

ಸುಮಾರು ಹಲವಾರು ನಾಯಿಗಳಿಗೆ ಪ್ರತಿನಿತ್ಯ ಆಹಾರ ನೀಡುತ್ತಿರುವ ಶೀನು ಅವರು, "ಮೂಕ ಪ್ರಾಣಿಗಳಿಗೆ ಆಹಾರ ನೀಡಿದರೆ ನನಗೆ ಏನೂ ಕಡಿಮೆಯಾಗುವುದಿಲ್ಲ. ಅವುಗಳಿಗೆ ಸೇವೆ ಮಾಡಿದರೆ ಸಾರ್ವಜನಿಕರು ನನ್ನನ್ನು ಮತ್ತು ನನ್ನಲ್ಲಿ ಕೆಲಸ ಮಾಡುವ ಕಾರ್ಮಿಕರನ್ನು ಆಶೀರ್ವದಿಸುತ್ತಾರೆ. ಅದರಿಂದಲೇ ನಮ್ಮ ವ್ಯಾಪಾರವೂ ಉತ್ತಮವಾಗಿ ನಡೆಯುತ್ತಿದೆ" ಎಂದು ಸಂತಸ ವ್ಯಕ್ತಪಡಿಸಿದರು.

ಪ್ರಾಣಿಗಳ ಮೇಲಿನ ಕಾಳಜಿ ಮತ್ತು ದಯಾಭಾವನೆ ಇಂದಿನ ಸಮಾಜಕ್ಕೆ ಮಾದರಿಯಾಗಿದ್ದು, ಯುವಜನತೆ ಹಾಗೂ ವ್ಯಾಪಾರಸ್ಥರು ಇಂತಹ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ. ಪಶು-ಪಕ್ಷಿಗಳನ್ನು ರಕ್ಷಿಸಿ, ಅವುಗಳಿಗೂ ಬದುಕುವ ಹಕ್ಕಿದೆ ಎಂಬ ಸಂದೇಶವನ್ನು ಶೀನು ಅವರು ತಮ್ಮ ಕಾರ್ಯದ ಮೂಲಕ ಸಾರುತ್ತಿದ್ದಾರೆ.

## ತಾಲೂಕು ವಕೀಲರ ಸಂಘದ ವತಿಯಿಂದ ವರ್ಗವಣೆ ಹೊಂದಿದ ಹಿರಿಯ ಸಿವೀಲ್‌ನ್ಯಾಯಾಧೀಶರಿಗೆ ಸನ್ಮಾನ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ವಕೀಲರ ಸಂಘದ ಕಚೇರಿಯ ಸಭಾಂಗಣದಲ್ಲಿ ತಾಲೂಕು ವಕೀಲರ ಸಂಘದ ವತಿಯಿಂದ ವರ್ಗವಣೆ ಹೊಂದಿದ ಹಿರಿಯ ಸಿವೀಲ್ ನ್ಯಾಯಾಲಯದ ನ್ಯಾಯಾಧೀಶರಿಗೆ ಹಮ್ಮಿಕೊಂಡ ಬಿಳ್ಕೋಡುಗೆ ಸಮಾರಂಭದಲ್ಲಿ ತಾಲೂಕು ವಕೀಲರ ಸಂಘದ ವತಿಯಿಂದ ಹಿರಿಯ ಸಿವೀಲ್ ನ್ಯಾಯಾಲಯದ ನ್ಯಾಯಾಧೀಶರಾದ ಶಿವರಾಜ ವಿ ಸಿದ್ದೇಶ್ವರ ದಂಪತಿಗಳನ್ನು ವಕೀಲರ ಸಂಘದ ತಾಲೂಕು ಅಧ್ಯಕ್ಷರಾದ ರವಿಕುಮಾರ ಪಾಟೀಲ್ ಸನ್ಮಾನಿಸಿ ಗೌರವಿಸಿ ಮಾತನಾಡಿ ಮಾನ್ವಿ ಹಿರಿಯ ಸಿವೀಲ್ ನ್ಯಾಯಾಲಯದ ನ್ಯಾಯಾಧೀಶರಾದ ಶಿವರಾಜ ವಿ ಸಿದ್ದೇಶ್ವರವರು ಕಳೆದ 3 ವರ್ಷಗಳ ಅವಧಿಯಲ್ಲಿ ಹಿರಿಯ 2ನೇಪುಟಕ್ಕೆ

ಮೊದಲನೇ ಪುಟದಿಂದ

## ತಾಲೂಕು ವಕೀಲರ ಸಂಘದ ವತಿಯಿಂದ ವರ್ಗವಣೆ ಹೊಂದಿದ ಹಿರಿಯ ಸಿವೀಲ್‌ನ್ಯಾಯಾಧೀಶರಿಗೆ ಸನ್ಮಾನ

ಸಿವೀಲ್‌ನ್ಯಾಯಾಧಿಶರಾಗಿ ಉತ್ತಮ ಸೇವೆ ಸಲ್ಲಿಸಿರುವುದಲ್ಲದೆ ತಾಲೂಕಿನ ವಕೀಲರಿಗೆ ಉತ್ತಮ ಮಾರ್ಗದರ್ಶನವನ್ನು ನೀಡಿದ್ದಾರೆ ಹಾಗೂ ತಾಲೂಕಿನ ವಕೀಲರ ಭವನದ ಕಟ್ಟಡ ಉತ್ತಮ ರೀತಿಯಲ್ಲಿ ಪೂರ್ಣಗೊಂಡು ಉದ್ಘಾಟನೆಯಾಗುವರೆಗೂ ಅಗತ್ಯ ಸಹಕಾರ ಹಾಗೂ ಮಾರ್ಗದರ್ಶನ ನೀಡಿದ್ದಾರೆ.ಹಾಗೂ ವಕೀಲರ ಸಂಘಕ್ಕೆ ಮೂಲ ಸೌಲಭ್ಯಕ್ಕಾಗಿಯು ಸಂಬಂದಿಸಿದ ಸರಕಾರಿ ಇಲಾಖೆಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದ್ದಾರೆ ಬೆಂಗಳೂರಿಗೆ ವರ್ಗಾವಣೆ ಗೊಂಡು ಹೋಗುತ್ತಿರುವುದರಿಂದ ತಾಲೂಕು ವಕೀಲರ ಸಂಘದಿಂದ ಬಿಳ್ಕೋಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ತಾಲೂಕು ವಕೀಲರ ಸಂಘದಿಂದ ಸನ್ಮಾನವನ್ನು ಸ್ವೀಕರಿಸಿ ಹಿರಿಯ ಸಿವೀಲ್ ನ್ಯಾಯಾಲಯದ ನ್ಯಾಯಾಧಿಶರಾದ ಶಿವರಾಜ ವಿ ಸಿದ್ದೇಶ್ವರ ಮಾತನಾಡಿ ನ್ಯಾಯಕ್ಕಾಗಿ ನ್ಯಾಯಾಲಯಕ್ಕೆ ಆಗಮಿಸುವ ಕಕ್ಷಿದಾರರಿಗೆ ನ್ಯಾಯಾದಾನದಲ್ಲಿ ವಿಳಂಬವಾಗಬರದು ಬೇಗ ನ್ಯಾಯಸಿಗಬೇಕು ಎನ್ನುವ ಉದ್ದೇಶದಿಂದ ಮಾನ್ವಿಯ ನ್ಯಾಯಾಲಯದಲ್ಲಿ ಪ್ರಾರಂಭದಲ್ಲಿ ಇದ್ದ ಹಳೆ 1200 ಸಿವೀಲ್ ಕೇಸ್ ಪ್ರಕರಣಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಅದ್ಯತೆಯ ಮೇರೆಗೆ 900 ಕೇಸ್‌ಗಳನ್ನು ವಿಲೇವಾರಿ ಮಾಡಲಾಗಿದೆ ಹಾಗೂ 200 ಪ್ರಕರಣಗಳು ರಾಜಿಸಂಧಾನವಾಗಿವೇ.ಇನ್ನೂ 300 ಪ್ರಕರಣಗಳು ಬಾಕಿ ಉಳಿದಿವೇ.ಯುವ ವಕೀಲರು ನಿರಂತರವಾದ ಅಧ್ಯಾಯನ ನಡೆಸಿದಾಗ ಮಾತ್ರ ಉತ್ತಮವಾಗಿ ವಕೀಲಿ ವೃತ್ತಿಯನ್ನು ನಡೆಸುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಹಿರಿಯ ವಕೀಲರಾದ ಎ.ಬಿ.ಉಪಳಮಠ ಮಾತನಾಡಿ ಹಿರಿಯ ಸಿವೀಲ್ ನ್ಯಾಯಾಲಯದ ನ್ಯಾಯಾಧಿಶರಾದ ಶಿವರಾಜ.ವಿ .ಸಿದ್ದೇಶ್ವರರವರು ಕಳೆದ ಮೂರು ವರ್ಷಗಳ ಅವಧಿಯಲ್ಲಿ ಉತ್ತಮ ಕಾರ್ಯಸಲ್ಲಿಸಿ ಜನರಿಗೆ ಉತ್ತಮವಾದ ನ್ಯಾಯದಾನವನ್ನು ನೀಡಿದ್ದಾರೆ ಹಾಗೂ ವಕೀಲರಿಗೂ ಕೂಡ ಅಗತ್ಯ ಸಹಕಾರ ನೀಡಿ ಮಾರ್ಗದರ್ಶನವನ್ನು ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವರ್ಗವಣೆಗೊಂಡ ಹಿರಿಯ ಸಿವೀಲ್ ನ್ಯಾಯಾಲಯದ ನ್ಯಾಯಾಧಿಶರಾದ ಶಿವರಾಜ.ವಿ .ಸಿದ್ದೇಶ್ವರ ದಂಪತಿಗಳನ್ನು ವಕೀಲರ ಸಂಘದವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಸಹಾಯಕ ಸರಕಾರಿ ಅಭಿಯೋಜಕರಾದ ಅರ್ಚನಾ ಯಾದವ್, ಪಿ.ಐ.ಸೋಮಶೇಖರ ಎಸ್,ಕೆಂಚರೆಡ್ಡಿ, ತಾಲೂಕು ವಕೀಲರ ಸಂಘದ ಉಪಾಧ್ಯಕ್ಷರಾದ ರಾಯಪ್ಪ ವಿಶ್ವನಾಥ, ಜಂಟಿ ಕಾರ್ಯದರ್ಶಿ ಚಂದ್ರಕಾಲ,ಗೂಗಲ್ ನಾಗರಾಜ, ಖಜಾಂಚಿ ಸ್ಟೇಲಾ ಶಾರ್ಲಟ್,ಯಲ್ಲಪ್ಪ ಬಾದರದಿನ್ನಿ, ಹಿರಿಯ ವಕೀಲರಾದ ಶೇಖರಪ್ಪ ಪಾಟೀಲ್, ಗುಮ್ಮಬಸವರಾಜ, ಮಲ್ಲಿಕಾರ್ಜುನ ಪಾಟೀಲ್, ಸಿದ್ದಲಿಂಗಪ್ಪ ವಕೀಲರು ಬಿ.ಕೆ.ಅಮರೇಶಪ್ಪ, ಅಯ್ಯಪ್ಪನಾಯಕ, ಗುಮ್ಮಬಸವರಾಜ, ಮನೋಹರ್ ವಿಶ್ವಕರ್ಮ,ಶ್ಯಾಮಸುಂದರನಾಯಕ ಸೇರಿದಂತೆ ತಾಲೂಕು ವಕೀಲರ ಸಂಘದ ಸದಸ್ಯರು ಭಾಗವಹಿಸಿದರು.

## ಶವ ಸಂಸ್ಕಾರ ಪೆಟ್ಟಿಗೆ ಹಸ್ತಾಂತರಿಸಲು ಅರ್ಜಿ ಆಹ್ವಾನ

**ರಾಯಚೂರು ಮೇ.20:** ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿ ಪ್ರದೇಶದಲ್ಲಿ 2019-20ನೇ ಸಾಲಿನ ನಗರಸಭೆಯ ನಿಧಿಯಲ್ಲಿ ಶೇ.29 ಯೋಜನೆಯಲ್ಲಿ ಕೊಟೇಷನ್ ಮುಖಾಂತರ ಖರೀದಿಸಿರುವ ಶವ ಸಂಸ್ಕಾರ ಪೆಟ್ಟಿಗೆಯನ್ನು ಸಫಾಯಿ ಕರ್ಮಚಾರಿ ಜನಾಂಗದವರಿಗೆ ಹಸ್ತಾಂತರಿಸಲು ಸಮಾಜದ ಸಂಘದ ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ.

ಶವ ಸಂಸ್ಕಾರ ಪೆಟ್ಟಿಗೆಯನ್ನು ಇಡುವುದಕ್ಕೆ ಕೋಣೆಯ ವ್ಯವಸ್ಥೆ ಇರತಕ್ಕದ್ದು. ಸಫಾಯಿ ಕರ್ಮಚಾರಿ ಜನಾಂಗಕ್ಕೆ ಮಾತ್ರ ಸೀಮಿತವಾಗಿರುತ್ತದೆ. ಸಫಾಯಿ ಕರ್ಮಚಾರಿ ಜನಾಂಗದ ಸಂಘವು ಖಂಭಿಜಣಥಿ ಖಜಝಣಡಿಚಿಣಖಂಟಿ ಂಭಿಣ 1860/ ಖಿಡಿಣಾಣ ಂಭಿಣ 1860 ನಲ್ಲಿ ನೊಂದಾಯಿತವಾಗಿರುವ ಸಂಘದ ವತಿಯಿಂದ ಜೂನ್ 03ರ ಸಂಜೆ 5ಗಂಟೆಯೊಳಗಾಗಿ ಪಾಲಿಕೆಯ ಡೇ-ನಲ್ಮ್ ವಿಭಾಗಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.24ಕ್ಕೆ ಪ್ರತಿಷ್ಠಿತ ಶಾಲೆಗಳ ಪ್ರವೇಶ ಪರೀಕ್ಷೆ

**ರಾಯಚೂರು ಮೇ.20:** ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ 2026-276ನೇ ಸಾಲಿಗೆ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ದಾಖಲಿಸಲು ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಪ್ರವೇಶ ಪರೀಕ್ಷೆಯು ಮೇ.24ಕ್ಕೆ ನಡೆಯಲಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುವಂತೆ ಕೋರಲಾಗಿದೆ.

ಪ್ರವೇಶ ಪರೀಕ್ಷೆಯು ಮೇ.24ರ ಭಾನುವಾರ ಬೆಳಿಗ್ಗೆ 10.30ಗಂಟೆಗೆ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಸ್ಟೇಷನ್ ರಸ್ತೆ, ರಾಯಚೂರುನಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಆಯಾ ತಾಲೂಕಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಗಳಿಂದ ಪ್ರವೇಶ ಪತ್ರಗಳನ್ನು ಕಳುಹಿಸಲಾಗಿದ್ದು, ಒಂದು ವೇಳೆ ಪ್ರವೇಶ ಪತ್ರ ತಲುಪದೇ ಇದ್ದಲ್ಲಿ ಪರೀಕ್ಷೆಯ ಒಂದು ದಿನ ಮೊದಲು ಈ ಕಚೇರಿಯಿಂದ ಪ್ರವೇಶ ಪತ್ರದ ಎರಡನೇ ಪ್ರತಿಯನ್ನು ಪಡೆದುಕೊಂಡು 5ನೇ ತರಗತಿ ಅಂಕಪಟ್ಟಿಯೊಂದಿಗೆ ಪರೀಕ್ಷೆಯ ದಿನದಂದು ಬೆಳಿಗ್ಗೆ 9.30 ಗಂಟೆಯೊಳಗೆ ಪರೀಕ್ಷೆ ನಡೆಯುವ ಸ್ಥಳದಲ್ಲಿ ಹಾಜರಾಗಬೇಕೆಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಮೇ.20:** ರಾಯಚೂರಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ವ್ಯಾಪ್ತಿಯಲ್ಲಿ 08 ಅಂಗನವಾಡಿ ಕಂ ಕ್ರಷ್ ಕೇಂದ್ರಗಳ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಆಫ್ ಲೈನ್ ಮುಖಾಂತರ ಪ್ರಕಟಣೆ ಹೊರಡಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಖಾಲಿ ಇರುವ ಹುದ್ದೆಗಳ ವಿವರ: ಅರಬ್ ಮೊಹಲ್ಲಾ-03ರ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆ,

ಪಂಚಬಿಬಿಪಹಾಡ-01ರ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆ, ಎಲ್.ಬಿ.ಎಸ್.ನಗರ-02ರ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆ, ಆಶೋಕ ನಗರ-02ರ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆ, ರಾಮನಗರ-01ರ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆ, ಹುಂಡೇಕಾರ ಕಾಲೋನಿ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆ, ಯರಮರಸ್ ಕ್ಯಾಂಪ್-01ರ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆ, ಹೊಸ ಆಶ್ರಯ ಕಾಲೋನಿ-02ರ ಅಂಗನವಾಡಿ ಕೇಂದ್ರದಲ್ಲಿ 1 ಕ್ರಷ್ ಅಂಗನವಾಡಿ ಕಾರ್ಯಕರ್ತೆ, 1 ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಹ ಆಸಕ್ತರು ಮೇ.25ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅಭರ್ಥಿಯು ಸ್ಥಳಿಯು ಅಂಗನವಾಡಿ ಕಂ ಕ್ರಷ್ ಕೇಂದ್ರದ ಸರ್ವೆ ವ್ಯಾಪ್ತಿಯಲ್ಲಿ ವಾಸವಾಗಿರಬೇಕು. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಸಂಬಂಧಪಟ ಅಂಗನವಾಡಿ ಕೇಂದ್ರದ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆಯಿಂದ ಸರ್ವೆ ವ್ಯಾಪ್ತಿಯಲ್ಲಿರುವ ಬಗ್ಗೆ ದೃಡೀಕರಣ ಪಡೆದು ಸಲ್ಲಿಸುವುದು. ಅಭ್ಯರ್ಥಿಯು ಮಹಿಳೆ ಆಗಿರಬೇಕು.

ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷ ಮಂಡಳಿ ನಡೆಸುವ 10ನೇ ತರಗತಿಯಲ್ಲಿ ತೇರ್ಗಡೆ ಆಗಿರುವವರನ್ನು ಅಥವಾ ತತ್ಸಮಾನ ವಿಧ್ಯಾರ್ಹತೆ ಹೊಂದಿರಬೇಕು. ಮತ್ತು ಸದರಿ ವಿಧ್ಯಾರ್ಹತೆಯ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲಿ ಕನಿಷ್ಠ 7ನೇ ತರಗತಿ ಪಾಸಾಗಿರುವ ಅಭ್ಯರ್ಥಿಯನ್ನು ಪರಿಗಣಿಸಬಹದು. ವಯೋಮಿತಿ, ಅರ್ಜಿಸಲ್ಲಿಸಲು ನೇಮಕಾತಿ ಅಧಿಸೂಚನೆ ಹೊರಡಸಿದ ದಿನಾಂಕಕ್ಕೆ ಕನಿಷ್ಠ 18 ವರ್ಷ ಪೂರ್ಣಗೊಂಡಿರಬೇಕು ಮತ್ತು ಗರಿಷ್ಠ 35 ವರ್ಷ ಮೀರಿರಬಾರದು.

ವಿಧವೆಯರು ಮತು ಅಂಗವಿಕಲರಿಗೆ 10ವರ್ಷ ವಯೋಮಿತಿಯಲ್ಲಿ ರಿಯಾಯಿತಿ ಇರುತ್ತದೆ. ಅಭ್ಯರ್ಥಿಯು 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ/ಕನ್ನಡವನ್ನು ಒಂದು ಬಾಷಾ ವಿಷಯವಾಗಿ ಓದಿರಬೇಕು.

ಆಪೇಕ್ಷಿತ ವಿಧ್ಯಾರ್ಹತೆ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ 6 ತಿಂಗಳಿಂದ 6 ವರ್ಷದ ಮಕ್ಕಳ ಪೋಷಣೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದಂತೆ ಕನಿಷ್ಠ 6 ತಿಂಗಳ ಅವಧಿಯ ವಿಷಯವನ್ನು ಅಥವಾ ತರಬೇತಿಯನ್ನು ಪಡೆದಿರಬೇಕು. ಆದ್ಯತೆ ಗುಂಪು ರಾಷ್ಟ್ರೀಯ ಶಿಶು ಪಾಲನಾ ಕೇಂದ್ರದಲ್ಲಿ ಸೇವ ಸಲ್ಲಿಸಿರುವ ಶಿಕ್ಷಕಿ ಹಾಗೂ ಸಹಾಯಕಿ, ವಿಧವೆಯರು, ವಿಷೇಶ ಚೇತನರು (ಕನಿಷ್ಠ ಶೇಕಡಾ 40 ಗರಿಷ್ಠಶೇಕಡಾ 60 ರಷ್ಟು ವಿಕಲಚೇತನರು ಮಾತ್ರ ಪರಿಗಣಿಸಲಾಗುವುದೆಂದು ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.22ರಂದು ಮಟಮಾರಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು ಮೇ.20:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಮಟಮಾರಿ ವಿದ್ಯುತ್ ಉಪ-ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.22ರ ಬೆಳಿಗ್ಗೆ 7ರಿಂದ ಮಧ್ಯಾಹ್ನ 03ಗಂಟೆಯವರೆಗೆ ಮಟಮಾರಿ ಉಪ ಕೇಂದ್ರದ ಎಲ್ಲಾ ಫೀಡರ್‌ಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮರಾವತಿ ದೋಬಿಘಾಟ್ ಬಳಿ ರಸ್ತೆ ದುರಸ್ಥಿಗೆ ಆಗ್ರಹಿಸಿ ಅಂಬೇಡ್ಕರ್ ಸೇನೆ ನೇತೃತ್ವದಲ್ಲಿ ರಸ್ತೆತಡೆ ಪ್ರತಿಭಟನೆ



**ಹೊಸಪೇಟೆ.ಮೇ.20-** ನಗರದ ಅಮರಾವತಿ ದೋಬಿ ಘಾಟ್ ಬಳಿಯ ಹೊಸಪೇಟೆ ಉಪವಿಭಾಗದ ಆಸ್ಪತ್ರೆ ರಸ್ತೆಯಲ್ಲಿನ ಬಸವಣ್ಣ ಕಾಲುವೆಯ ಸೇತುವೆ ಗುಂಡಿ ಬಿದ್ದು ಸಾರ್ವಜನಿಕರ ಸಂಚಾರಕ್ಕೆ ಅಡಚಣೆ ಆಗುತ್ತಿರುವ ಹಿನ್ನಲೆಯಲ್ಲಿ ದುರಸ್ಥಿಗೆ ಒತ್ತಾಯಿಸಿ ಅಂಬೇಡ್ಕರ್ ಸೇನೆ ಹಾಗೂ ಕರುನಾಡ ಕಲಿಗಳ ಕ್ರಿಯಾಶೀಲ ಸಮಿತಿ ನೇತೃತ್ವದಲ್ಲಿ ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಉಪವಿಭಾಗದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ತೆರಳುವ ಮುಖ್ಯ ರಸ್ತೆಯಲ್ಲಿನ ಬಸವಣ್ಣ ಕಾಲುವೆಗೆ ನಿರ್ಮಿಸಲಾದ ಸೇತುವೆ ದೊಡ್ಡ ಗುಂಡಿ ಬಿದ್ದು. ಹಲವಾರು ಅಪಘಾತಗಳಿಗೆ ಆಸ್ಪದ ನೀಡುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಗುಂಡಿ ಮುಚ್ಚಿ ಸೇತುವೆ ದುರಸ್ಥಿ ಮಾಡದಿರುವುದನ್ನು ಖಂಡಿಸಿ ರಸ್ತೆ ತಡೆ ನಡೆಸಿ ಪ್ರತಿಭಟಿಸಲಾಯಿತು.

ಸುದ್ದಿ ತಿಳಿಯುತ್ತಲೇ ಸ್ಥಳಕ್ಕೆ ಆಗಮಿಸಿದ ನಗರಸಭೆ ಪೌರಾಯುಕ್ತ ಎರಗುಡಿ ಶಿವಕುಮಾರ್, ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರವಿ ನಾಯ್ಕ, ಪ್ರತಿಭಟನಾಕಾರರ ಮನವೊಲಿಸಲು ಪ್ರಯತ್ನಿಸಿದರು. ಆದರೆ ಪ್ರತಿಭಟನಾಕಾರರು ಕೂಡಲೇ ಗುಂಡಿ ಮುಚ್ಚಿ ರಸ್ತೆ ದುರಸ್ಥಿ ಮಾಡಬೇಕು. ಈ ರಸ್ತೆಯಲ್ಲಿ ಪ್ರತಿ ದಿನ ಮಹಿಳೆಯರು, ಮಕ್ಕಳು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಸಾವಿರಾರು ವಾಹನಗಳು ಸಂಚರಿಸುತ್ತವೆ. ಏನಾದರೂ ಅನಾಹುತವಾದರೆ ಇದಕ್ಕೆ ಯಾರು ಹೊಣೆ ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಶಾಸಕರ ವಿರುದ್ಧ ಘೋಷಣೆ ಕೂಗಿದರು. ಶೀಘ್ರವೇ ರಸ್ತೆ ದುರಸ್ಥಿ ಆಗದಿದ್ದರೆ, ಶಾಸಕರ ನಿವಾಸದ ಎದುರು ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ನಂತರ ಪ್ರತಿಭಟನಾಕಾರರು ನಗರಸಭೆ ಅಧ್ಯಕ್ಷ ಎನ್.ರೂಪೇಶ್ ಕುಮಾರ್, ಪೌರಾಯುಕ್ತ ಎರಗುಡಿ ಶಿವಕುಮಾರ್, ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರವಿ ನಾಯ್ಕ್ ಗೆ ಮನವಿ ಸಲ್ಲಿಸಿದರು. ಮನವಿಪತ್ರ ಸ್ವೀಕರಿಸಿದ ಅಧಿಕಾರಿಗಳು ಕೂಡಲೇ ತಾತ್ಕಾಲಿಕ ದುರಸ್ಥಿ ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿ ಕೊಡಲಾಗುವುದು. 2 ತಿಂಗಳಲ್ಲಿ ಶಾಶ್ವತ ಕಾಮಗಾರಿ ನಡೆಸುವುದಾಗಿ ನೀಡಿದ ಭರವಸೆ ಹಿನ್ನಲೆಯಲ್ಲಿ ಪ್ರತಿಭಟನಾಕಾರರು ಪ್ರತಿಭಟನೆಯನ್ನು ಹಿಂದಕ್ಕೆ ಪಡೆದರು.ರಸ್ತೆ ಪಡೆ ಪ್ರತಿಭಟನೆ ಹಿನ್ನಲೆಯಲ್ಲಿ ಈ ಭಾಗದಲ್ಲಿ ಕೆಲ ಕಾಲ ಸಂಚಾರ ವ್ಯವಸ್ಥೆ ಅಸ್ತವ್ಯಸ್ತಗೊಂಡಿತ್ತು. ಬಡಾವಣೆ ಪಿಎಸ್ಐ ಶಿವ ಕುಮಾರ್ ಮತ್ತವರ ಸಿಬ್ಬಂದಿ ಪರಿಸ್ಥಿತಿ ನಿಭಾಯಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ಪ್ರತಿಭಟನೆಯಲ್ಲಿ ಅಂಬೇಡ್ಕರ್ ಸೇನೆ ವಿಜಯನಗರ ಜಿಲ್ಲೆ ಯುವ ಘಟಕದ ಅಧ್ಯಕ್ಷ ಹೆಚ್.ಈರಣ್ಣ, ಗೌರವಾಧ್ಯಕ್ಷ ವೈ.ರುದ್ರಪ್ಪ, ಉಪಾಧ್ಯಕ್ಷ ಹೆಚ್.ಹನುಮಂತಪ್ಪ, ಪ್ರಧಾನ ಕಾರ್ಯದರ್ಶಿ ಕೆ.ರವಿ ಕುಮಾರ್, ಕಾರ್ಯದರ್ಶಿ ಹೊನ್ನೂರುಸ್ವಾಮಿ, ಕರುನಾಡ ಕಲಿಗಳ ಕ್ರೀಯಾಶೀಲ ಸಮಿತಿ ಅಧ್ಯಕ್ಷ ಪಿ.ವಿ.ವೆಂಕಟೇಶ, ಉಪಾಧ್ಯಕ್ಷ ಗುಜ್ಜಲ ಗಣೇಶ, ಸ್ಲಂ ಜನರ ಸಂಘಟನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ವೆಂಕಟೇಶ್, ಯುವ ಕಾಂಗ್ರೇಸ್ ಮುಖಂಡ ಸಿ.ಆರ್.ಭರತ್, ಶೇಕ್ಷಾವಲಿ ಸೇರಿದಂತೆ ಮತ್ತಿತರರು ಭಾಗವಹಿಸದ್ದರು.

## ಟ್ರಾನ್ಸಫಾರ್ಮರ್ ಅಳವಡಿಕೆ ಹಿನ್ನಲೆಯಲ್ಲಿ ಮೇ.22ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಮೇ.20:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-01ರ ವ್ಯಾಪ್ತಿಗೆ ಬರುವ ಆರ್‌ಸಿಆರ್ 4 ಹಾಗೂ ಆರ್‌ಸಿಆರ್ 7ರ ಫೀಡರ್‌ಗಳಲ್ಲಿ ಹೈ-ಟೆನ್ಷನ್ ಲೈನುಗಳು ಇದ್ದು, ಕುಲಸುಂಬಿ ಕಾಲೋನಿಯಲ್ಲಿ 100 ಕೆವಿಎ ಬದಲಾಗಿ 63 ಕೆವಿಎ ಟ್ರಾನ್ಸಫಾರ್ಮರ್ ಅನ್ನು ಅಳವಡಿಸುವಂತೆ ಸಾರ್ವಜನಿಕರು ಕೋರಿರುವ ಪ್ರಯುಕ್ತ ಮೇ.22ರ ಬೆಳಿಗ್ಗೆ 11ರಿಂದ ಮಧ್ಯಾಹ್ನ 1ರವರಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 11ರಿಂದ ನಗರದ ನಿಜಲಿಂಗಪ್ಪ ಕಾಲೋನಿ, ಡಿಸಿ ಮನೆ, ಕುಲಸುಂಬಿ ಕಾಲೋನಿ, ಎಮ್.ಆರ್.ಎಸ್. ಕಾಲೋನಿ, ಹೊಸೂರು ಸಾಯಿಬಾಬ ಕಾಲೋನಿ, ದೇವರಾಜು ಕಾಲೋನಿ, ರಾಂಪುರ ರಸ್ತೆ, ಹೊಸೂರು, ರಾಮಾಂಜಿನೇಯ ಕಾಲೋನಿ, ಮೆಥೋಡಿಸ್ಟ್ ಚರ್ಚ್, ರೈಲ್ವೆ ಹೆಚ್‌ಟಿಆರ್ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಿಣಜಗಿ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ ಗುದ್ದಲಿ ಪೂಜೆ



**ಕಲಬುರಗಿ:ಮೇ.20:** ಜಿಲ್ಲೆಯ ಅಫಜಲಪುರ ಮತಕ್ಷೇತ್ರದ ಮಿಣಜಗಿ ಗ್ರಾಮದಲ್ಲಿ ಕೆಕೆಆರ್‌ಡಿಬಿ (ಏಏಖಆಃ) 2025-26ನೇ ಸಾಲಿನ ಮೈಕ್ರೋ (ಎಸಿಪಿ) ಯೋಜನೆಯಡಿ ಮಂಜೂರಾದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಮಂಗಳವಾರ ಗುದ್ದಲಿ ಪೂಜೆ ನೆರವೇರಿಸಲಾಯಿತು.ಸುಮಾರು 13.35 ಲಕ್ಷ ರೂ. ಅಂದಾಜು ವೆಚ್ಚದಲ್ಲಿ ನಿರ್ಮಾಣವಾಗಲಿರುವ ಈ ರಸ್ತೆ, ಗ್ರಾಮದಲ್ಲಿನ ಪ್ರಮುಖ ಸಂಪರ್ಕ ಮಾರ್ಗವಾಗಿದ್ದು, ಹಲವು ವರ್ಷಗಳಿಂದ ಕೆಸರು ಮತ್ತು ದುಸ್ಥಿತಿಯಿಂದ ಬಳಲುತ್ತಿದ್ದ ಜನರಿಗೆ ಶಾಶ್ವತ ಪರಿಹಾರ ನೀಡಲಿದೆ. ಕಾಮಗಾರಿ ಪೂರ್ಣಗೊಂಡ ಬಳಿಕ ಸಂಚಾರ ಸುಗಮವಾಗುವುದರ ಜೊತೆಗೆ ಗ್ರಾಮಾಭಿವೃದ್ಧಿಗೆ ಉತ್ತೇಜನ ಸಿಗಲಿದೆ ಎಂದು ಗ್ರಾಮಸ್ಥರು ಅಭಿಪ್ರಾಯಪಟ್ಟರು.ಗ್ರಾಮಸ್ಥರ ಸಹಭಾಗಿತ್ವದಲ್ಲಿ ಸರಳವಾಗಿ ನಡೆದ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಸ್ಥಳೀಯರು ರಸ್ತೆ ನಿರ್ಮಾಣ ಕಾರ್ಯ ಶೀಘ್ರ ಪೂರ್ಣಗೊಳ್ಳಲಿ ಎಂದು ಆಶಿಸಿದರು. ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಈ ಯೋಜನೆ ಗ್ರಾಮದಲ್ಲಿ ಹೊಸ ಆಶಾಭಾವನೆ ಮೂಡಿಸಿದೆ. ಈ ಸಂದರ್ಭದಲ್ಲಿ ಸಿದ್ದಣ್ಣ ಗೌಡ ಪಾಟೀಲ್, ಲಿಂಗಣ್ಣ ಗೌಡ ಪಾಟೀಲ್, ಅಶೋಕ್ ನಡುವಿನಕೆರಿ, ಮಾಳಮ್ಮ ನಡುವಿನಕೆರಿ, ಹಸನಪ್ಪ ಪಟ್ಟೆದಾರ್, ಮರಬು ಹರಿಜನ್, ಕಾಂಟ್ರಾಕ್ಟರ್ ಕುಮಾರಸ್ವಾಮಿ ಹಿರೇಮಠ, ಶಿವಕುಮಾರ್, ಸುಪ್ರೀತ್ ಹಿರೇಮಠ, ನವೀನ್ ರಾಠೋಡ್ ಸೇರಿದಂತೆ ಹಲವಾರು ಗ್ರಾಮಸ್ಥರು ಉಪಸ್ಥಿತರಿದ್ದರು.

ಗ್ರಾಮದ ಸಮಗ್ರ ಅಭಿವೃದ್ಧಿಗಾಗಿ ಇಂತಹ ಇನ್ನಷ್ಟು ಯೋಜನೆಗಳನ್ನು ಸರ್ಕಾರ ಜಾರಿಗೊಳಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

## ಎಸ್ಸಿ, ಎಸ್ಟಿ ಕುಂದು ಕೊರತೆಗಳ ನಿವಾರಣೆಗೆ ಕಟ್ಟುನಿಟ್ಟಿನ ಕ್ರಮ: ಆಯೋಗದ ಅಧ್ಯಕ್ಷ ಡಾ.ಎಲ್.ಮೂರ್ತಿ ಹೇಳಿಕೆ




**ಹೊಸಪೇಟೆ.ಮೇ.20–** ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಹಿತರಕ್ಷಣೆ ಹಾಗೂ ಅವರ ಸಮಸ್ಯೆಗಳ ಶೀಘ್ರ ಇತ್ಯರ್ಥಕ್ಕೆ ಆಯೋಗ ಬದ್ಧವಾಗಿದ್ದು, ಅರ್ಹರಲ್ಲದವರು ನಕಲಿ ಜಾತಿ ಪ್ರಮಾಣಪತ್ರ ಪಡೆದು ಉದ್ಯೋಗ ಗಿಟ್ಟಿಸಿಕೊಂಡಿರುವುದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ ರಾಜ್ಯದಲ್ಲಿ ಇಂತಹ 12 ನಕಲಿ ಪ್ರಮಾಣಪತ್ರಗಳನ್ನು ರದ್ದುಪಡಿಸಿ, ಅವರ ಉದ್ಯೋಗವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರಾದ ಡಾ: ಎಲ್.ಮೂರ್ತಿ ತಿಳಿಸಿದರು.ಸ್ಥಳೀಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಮುದಾಯದ ಮುಖಂಡರು, ಸಾರ್ವಜನಿಕರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಮಂಗಳವಾರ ಜರುಗಿದ ಮಹತ್ವದ ಕುಂದು ಕೊರತೆ ಮತ್ತು ಪ್ರಗತಿ ಪರಿಶೀಲನಾ ಸಭೆ ನಂತರ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು. ಆಯೋಗದ ಅಧ್ಯಕ್ಷನಾಗಿ ಕಳೆದ ಆರೂವರೆ ತಿಂಗಳಲ್ಲಿ ರಾಜ್ಯದ 15 ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಪ್ರವಾಸ ಕೈಗೊಂಡಿರುವ ಆಯೋಗಕ್ಕೆ ಇದು 16ನೇ ಜಿಲ್ಲೆಯಾಗಿದೆ ಎಂದು ತಿಳಿಸಿದರು.

ಪೌರಕಾರ್ಮಿಕರ ವೇತನಕ್ಕೆ ಸೂಚನೆ: ಜಿಲ್ಲೆಯ ಕೆಲವು ಪುರಸಭೆಗಳಲ್ಲಿ ಪೌರ ಕಾರ್ಮಿಕರಿಗೆ 11 ರಿಂದ 15 ತಿಂಗಳಾದರೂ ವೇತನ ಪಾವತಿಯಾಗದಿರುವುದು ಅತ್ಯಂತ ಗಂಭೀರ ವಿಚಾರವಾಗಿದೆ. ಸಾರ್ವಜನಿಕರ ಆರೋಗ್ಯ ಕಾಯುವ ಇವರ ಜೀವನದೊಂದಿಗೆ ಆಟವಾಡಬಾರದು. ಹೊರಗುತ್ತಿಗೆ ಪೌರಕಾರ್ಮಿಕರಿಗೂ ಕನಿಷ್ಠ 15,000 ದಿಂದ 16,000 ರೂ. ವೇತನವನ್ನು ಯಾವುದೇ ವಿಳಂಬವಿಲ್ಲದೆ ಚಾಚೂ ತಪ್ಪದೆ ಪಾವತಿಸಬೇಕು. ಹಾಗೂ ಪುರಸಭೆಗಳ ತೆರಿಗೆ ನಿಧಿಯಲ್ಲಿ ಇವರ ಮಕ್ಕಳಿಗೆ ವಿಶೇಷ ಸೌಲಭ್ಯಗಳನ್ನು ರೂಪಿಸಬೇಕು ಎಂದು ಜಿಲ್ಲಾ ಅಧಿಕಾರಿಗಳಿಗೆ ಆದೇಶಿಸಲಾಗಿದೆ.ಅಲೆದಾಟಕ್ಕೆ ಬ್ರೇಕ್: ಕಂದಾಯ ಇಲಾಖೆಯಲ್ಲಿ ಪಾಣಿ ತಿದ್ದುಪಡಿ, ಖಾತೆ ಬದಲಾವಣೆ ಹಾಗೂ ಆಕಾರಬಂದ್ ಸರ್ವೆಗೆ ಸಂಬಂಧಿಸಿದಂತೆ ಗಂಭೀರ ಸಮಸ್ಯೆಗಳಿರುವುದು ಗಮನಕ್ಕೆ ಬಂದಿದೆ. ದೂರದ ಊರುಗಳಿಂದ ಬರುವ ಜನರನ್ನು ಅಲೆದಾಡಿಸದಂತೆ ತಾಲೂಕು ಮತ್ತು ಜಿಲ್ಲಾ ದಂಡಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದ್ದು, ಅಧಿಕಾರಿಗಳು ಕಡ್ಡಾಯವಾಗಿ ಎಸ್ಸಿ, ಎಸ್ಟಿ ಮುಖಂಡರೊಂದಿಗೆ ಸಂಪರ್ಕದಲ್ಲಿದ್ದು ನಿಯಮಿತವಾಗಿ ಸಭೆ ನಡೆಸಬೇಕು ಎಂದು ತಿಳಿಸಿದರು.

**ಉದ್ಯೋಗಾವಕಾಶಕ್ಕೆ ಕ್ರಮ:** ಜಿಲ್ಲೆಯಲ್ಲಿ ಬೃಹತ್ ಕಂಪನಿಗಳು ಜಮೀನು ಸ್ವಾಧೀನಪಡಿಸಿಕೊಂಡಿದ್ದು, ಇದರಲ್ಲಿ ಪರಿಶಿಷ್ಟ ಸಮುದಾಯಗಳ ಭೂಮಿಯೂ ಸೇರಿದೆ. ಭೂಮಿ ಕಳೆದುಕೊಂಡ ಹಾಗೂ ಜಮೀನು ರಹಿತ ಸಮುದಾಯದ ವಿದ್ಯಾವಂತ ಯುವಕ–ಯುವತಿಯರಿಗೆ ಆಯಾ ಕಂಪನಿಗಳಲ್ಲೇ ಉದ್ಯೋಗಾವಕಾಶ ಕಲ್ಪಿಸಲು ಮತ್ತು ಕಂಪನಿಗಳ ಸಿಎರ್ (CSR) ನಿಧಿಯ ಹಣವನ್ನು ಈ ಸಮುದಾಯಗಳ ಅಭಿವೃದ್ಧಿಗೆ ಬಳಸಲು ಸರ್ಕಾರ ಮಟ್ಟದಲ್ಲಿ ನಿರ್ದೇಶನ ನೀಡಲಾಗುವುದು ಎಂದರು.

**ನಿವೇಶನ ಭಾಗ್ಯ:** ಹರಪನಹಳ್ಳಿ, ಕೂಡ್ಲಿಗಿ ಸೇರಿದಂತೆ ಜಿಲ್ಲೆಯ ಎಲ್ಲಾ ಆರು ತಾಲೂಕುಗಳಲ್ಲಿರುವ ಸ್ಲಂ ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿದೆ. ಮಳೆ ನೀರು ನುಗ್ಗಿ ಜನರು ತೊಂದರೆ ಅನುಭವಿಸುತ್ತಿರುವ ಬಗ್ಗೆ ಮಹಿಳೆಯರು ಅಳಲು ತೋಡಿಕೊಂಡಿದ್ದಾರೆ. ಈ ಭಾಗಗಳಲ್ಲಿ ಸೂಕ್ತ ಜಮೀನನ್ನು ಗುರುತಿಸಿ, ವಿಶೇಷ ಪ್ಯಾಕೇಜ್ ಮೂಲಕ ನಿವೇಶನ ಕಲ್ಪಿಸಿಕೊಡುವಂತೆ ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ.

**ಮಕ್ಕಳ ಆರೋಗ್ಯ ತಪಾಸಣೆ:** ಕಿತ್ತೂರು ರಾಣಿ ಚನ್ನಮ್ಮ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಮತ್ತು ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯ, ಸ್ವಚ್ಛತೆ ಮತ್ತು ಗುಣಮಟ್ಟದ ಶಿಕ್ಷಣ ಕಡ್ಡಾಯವಾಗಿದೆ. 1 ರಿಂದ 12 ನೇ ತರಗತಿಯವರೆಗಿನ ಮಕ್ಕಳ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಕೂಲಿ ಕಾರ್ಮಿಕರ ಮಕ್ಕಳಲ್ಲಿ ಕಂಡು ಬರುತ್ತಿರುವ ರಕ್ತಹೀನತೆ ಮತ್ತು ಶಿಶು ಮರಣ ಪ್ರಮಾಣ ತಡೆಗಟ್ಟಲು ಆರೋಗ್ಯ ಇಲಾಖೆ ನಿಯಮಿತ ತಪಾಸಣೆ ನಡೆಸಿ, ಪೌಷ್ಟಿಕ ಆಹಾರ ಒದಗಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡುವುದಾಗಿ ತಿಳಿಸಿದರು.ನಾಮ ಫಲಕ ಅಳವಡಿಕೆಗೆ ಸೂಚನೆ: ಸರ್ಕಾರದ 31 ಇಲಾಖೆಗಳಿಗೆ ಒದಗಿಸಲಾಗುವ ಎಸ್ಸಿಪಿ, ಟಿಎಸ್ಪಿ ನಿಧಿಯ ಬಳಕೆಯಲ್ಲಿ ಪಾರದರ್ಶಕತೆ ಇರಬೇಕು. ಕೆಲವು ಕಡೆ ಕಾಮಗಾರಿಗಳ 'ಮಿಕ್ಸಿಂಗ್' ಆಗುತ್ತಿರುವ ದೂರುಗಳು ಬಂದಿರುವುದರಿಂದ, ಇದನ್ನು ತಡೆಗಟ್ಟಲು ಯಾವ ವರ್ಷದಲ್ಲಿ, ಯಾವ ಇಲಾಖೆಯಿಂದ, ಎಷ್ಟು ನಿಧಿಯಲ್ಲಿ ಕಾಮಗಾರಿ ನಡೆದಿದೆ ಎಂಬುದನ್ನು ಸಾರ್ವಜನಿಕರಿಗೆ ತೋರಿಸಲು ಕಡ್ಡಾಯವಾಗಿ ನಾಮಫಲಕಗಳನ್ನು ಅಳವಡಿಸಬೇಕು ಎಂದು ಆದೇಶಿಸಲಾಗಿದೆ ಎಂದರು.

**ಅರಣ್ಯ ವಾಸಿಗಳನ್ನು ಒಕ್ಕಲೆಬ್ಬಿಸುವಂತಿಲ್ಲ:** ದೀರ್ಘ ಕಾಲದಿಂದ ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ಅಲೆಮಾರಿ ಮತ್ತು ಪರಿಶಿಷ್ಟ ಸಮುದಾಯಗಳ ಯಾವುದೇ ಕುಟುಂಬಗಳನ್ನು ಎಸ್‌ಟಿ ವರದಿ ಬರುವವರೆಗೂ ಒಕ್ಕಲೆಬ್ಬಿಸಬಾರದು ಎಂದು ಸರ್ಕಾರದ ಕಾರ್ಯದರ್ಶಿಗಳು ಹಾಗೂ ಕನ್ಸರ್ವೇಟರ್ ಆಫ್ ಫಾರೆಸ್ಟ್ ಅವರಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ. ಒಂದು ವೇಳೆ ಒಕ್ಕಲೆಬ್ಬಿಸಿದರೆ ಅವರಿಗೆ ಪರ್ಯಾಯವಾಗಿ ಮೂಲಭೂತ ಸೌಕರ್ಯ ಹಾಗೂ ಕಾರ್ಪಸ್ ಫಂಡ್ ಒದಗಿಸಬೇಕು ಎಂದು ತಿಳಿಸಿದರು.

**ಅಗತ್ಯವಿರುವೆಡೆ ಸ್ಮಶಾನ ಭೂಮಿ:** ಜಾತಿ ವ್ಯವಸ್ಥೆಯಿಂದಾಗಿ ಅಸ್ಪೃಶ್ಯತೆ ಎದುರಿಸುತ್ತಿರುವ ಸಮುದಾಯಗಳಿಗೆ ಶವ ಸಂಸ್ಕಾರದ ವೇಳೆ ಅಡ್ಡಿಪಡಿಸಿ ಅಟ್ರಾ ಸಿಟಿ ಪ್ರಕರಣಗಳು ದಾಖಲಾಗುತ್ತಿರುವುದು ಆಯೋಗದ ಗಮನಕ್ಕೆ ಬಂದಿದೆ. ಇದಕ್ಕೋಸ್ಕರ ಪ್ರತಿ ಕಂದಾಯ ಗ್ರಾಮಗಳನ್ನು ಗುರುತಿಸಿ, ಅಗತ್ಯವಿರುವ ಕಡೆ ಸ್ಮಶಾನ ಭೂಮಿ ಒದಗಿಸಿ, ದಾರಿ ಕಲ್ಪಿಸಿಕೊಡಲಾಗುವುದು. ಎಸ್ಸಿಪಿ, ಟಿಎಸ್ಪಿ ನಿಧಿಯ ಅಡಿಯಲ್ಲಿ ಸ್ಮಶಾನಗಳ ತಡೆಗೋಡೆ ಹಾಗೂ ಸ್ವಚ್ಛತೆ ಕಾಯ್ದುಕೊಳ್ಳಲು ಕಂದಾಯ ಇಲಾಖೆ ಮತ್ತು ಜಿಲ್ಲಾಡಳಿತಕ್ಕೆ ಆದೇಶಿಸಲಾಗಿದೆ.ಆನ್ಲೈನ್ ಹೆಲ್ಪ್ ಡೆಸ್ಕ್: ಆಯೋಗಕ್ಕೆ ದೂರು ಸಲ್ಲಿಸಲು ಸಾರ್ವಜನಿಕರು ಅಲೆಯುವುದನ್ನು ತಪ್ಪಿಸಲು ಮುಂದಿನ ದಿನಗಳಲ್ಲಿ ಸಂಪೂರ್ಣ ಆನ್ಲೈನ್ ವ್ಯವಸ್ಥೆ ತರಲಾಗುತ್ತಿದೆ. ಗ್ರಾಮೀಣ ಭಾಗದ ಜನರಿಗೆ ನೆರವಾಗಲು ಪ್ರತಿ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹೆಲ್ಪ್ ಡೆಸ್ಕ್ ಸ್ಥಾಪಿಸಿ, ಅಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸುವ ವ್ಯವಸ್ಥೆ ಮಾಡಲಾಗುವುದು. ಆ ಬಳಿಕ ನೋಟಿಸ್ ಜಾರಿ ಮಾಡಿ, ಅಗತ್ಯ ಬಿದ್ದರೆ ದೂರವಾಣಿ ಮೂಲಕ ಕರೆಸಿ ಸಮಸ್ಯೆ ಇತ್ಯರ್ಥಪಡಿಸಲಾಗುವುದು ಎಂದರು.

ಆಯೋಗಕ್ಕೆ ಸಲ್ಲಿಕೆಯಾಗಿರುವ ಸುಮಾರು 4,100 ಪ್ರಕರಣಗಳ ಪೈಕಿ ಕಳೆದ ಆರೂವರೆ ತಿಂಗಳಲ್ಲಿ 800 ಕ್ಕೂ ಹೆಚ್ಚು ಪ್ರಕರಣಗಳನ್ನು ಕೋರ್ಟ್ ಮುಖಾಂತರ ಪರಿಶೀಲಿಸಿ, 500 ರಿಂದ 600 ಪ್ರಕರಣಗಳನ್ನು ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ ಎಂದು ಆಯೋಗದ ಅಧ್ಯಕ್ಷರು ಸುದ್ದಿಗೋಷ್ಠಿಯಲ್ಲಿ ತಿಳಿಸಿ ಕುಂದು ಕೊರತೆ ಸಭೆಯಲ್ಲಿ 70 ಕ್ಕಿಂತ ಹೆಚ್ಚು ಅರ್ಜಿ ಸಲ್ಲಿಕೆಯಾಗಿದೆ ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ಅನುಸೂಚಿತ ಜಾತಿ ಮತ್ತು ಬುಡಕಟ್ಟು ಆಯೋಗದ ಕಾರ್ಯದರ್ಶಿ ಡಾ.ಹೆಚ್.ಎಸ್. ಶಿವರಾಮ್, ಸದಸ್ಯರಾದ ಗೀತಾ ಥಾವಂಶಿ, ಎನ್.ದಿವಾಕರ್, ಸುನೀಲ್ ಎಂ. ಉಕ್ಕಲಿ ಉಪಸ್ಥಿತರಿದ್ದರು.

## ವಿಶೇಷ ಕೃಷಿ ಜಾಗೃತಿ ಅಭಿಯಾನಕ್ಕೆ ಚಾಲನೆ:ಹೊಲದ ಮಣ್ಣಿನ ಆರೋಗ್ಯದ ಪರೀಕ್ಷೆಗೆ ತಿಪ್ಪೆಸ್ವಾಮಿ ಸಲಹೆ



**ಆಳಂದ:ಮೇ.20:** ರೈತರು ತಮ್ಮ ಹೊಲಗಳಲ್ಲಿ ಬಿತ್ತನೆಗೆ ಮುನ್ನ ಮಣ್ಣಿನ ಪರೀಕ್ಷೆ ಮಾಡಿಸುವುದು ಅತ್ಯಂತ ಅವಶ್ಯಕ ಎಂದು ಸಹಾಯಕ ಕೃಷಿ ನಿರ್ದೇಶಕ ತಿಪ್ಪೇಸ್ವಾಮಿ ಅವರು ರೈತರಿಗೆ ಸಲಹೆ ನೀಡಿದರು.

ತಾಲೂಕಿನಾದ್ಯಂತ ಕೃಷಿ ಇಲಾಖೆ ಮೂಲಕ ಆರಂಭಿಸಿದ ಮೇ 15 ರಿಂದ 31ರವರೆಗೆ ನಡೆಯುವ ವಿಶೇಷ ಕೃಷಿ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ರೈತರು ಮುಂಜಾಗ್ರತೆಯಿಂದ ಸಿದ್ಧರಾಗಬೇಕೆಂಬ ಉದ್ದೇಶದಿಂದ ತಾಲೂಕಿನ ಎಲ್ಲಾ ಹೋಬಳಿಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮೇ 15 ರಿಂದ ಆರಂಭಿಸಲಾಗಿದ್ದು, ಮೇ ಕೊನೆಯ ವಾರದವರೆಗೆ ನಿರಂತರವಾಗಿ ನಡೆಯಲಿದೆ.ರೈತರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಹೇಳಿದರು.

ಮಣ್ಣಿನ ಆರೋಗ್ಯ ತಿಳಿದ ನಂತರವೇ ಯಾವ ಬೆಳೆ ಬೆಳೆಯಬೇಕು, ಎಷ್ಟು ಪ್ರಮಾಣದ ರಸಗೊಬ್ಬರ ಬಳಸಬೇಕು ಎಂಬ ನಿರ್ಧಾರ ತೆಗೆದುಕೊಳ್ಳಲು ಸಾಧ್ಯ. ಮಣ್ಣು ಪರೀಕ್ಷೆ ಮಾಡಿಸದೆ ಅಂದಾಜಿನ ಮೇಲೆ ಗೊಬ್ಬರ ಹಾಕುವುದರಿಂದ ಹಣ ವ್ಯರ್ಥವಾಗಿ ಇಳುವರಿ ಕಡಿಮೆಯಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.

ಉತ್ತಮ ಇಳುವರಿ ಪಡೆಯಲು ಗುಣಮಟ್ಟದ ಬಿತ್ತನೆ ಬೀಜ ಆಯ್ಕೆ ಮಾಡುವುದು ಅತ್ಯಗತ್ಯ. ಬೀಜಗಳನ್ನು ಬಿತ್ತನೆಗೆ ಮುನ್ನ ಗಟ್ಟಿಗೊಳಿಸಬೇಕು ಹಾಗೂ ಶಿಫಾರಸ್ಸು ಮಾಡಿದ ಶಿಲೀಂದ್ರ ನಾಶಕ ಮತ್ತು ಜೀವಾಣು ಗೊಬ್ಬರಗಳಿಂದ ಬೀಜೋಪಚಾರ ಮಾಡಬೇಕು. ಬೀಜೋಪಚಾರದಿಂದ ಬೀಜ ಮೊಳಕೆಯೊಡೆಯುವ ಶಕ್ತಿ ಹೆಚ್ಚಾಗಿ ರೋಗ ನಿರೋಧಕ ಶಕ್ತಿ ವೃದ್ಧಿಯಾಗುತ್ತದೆ ಎಂದು ಅವರು ಹೇಳಿದರು.

ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆ ಮಣ್ಣಿನ ಆರೋಗ್ಯ ಹಾಳುಮಾಡುತ್ತದೆ. ಸಾರಜನಕ, ರಂಜಕ ಮತ್ತು ಪೊಟ್ಯಾಷ್ ಅನ್ನು ಸಮತೋಲನವಾಗಿ ಬಳಸಬೇಕು. ತಿಪ್ಪೆ ಗೊಬ್ಬರ ಮತ್ತು ಸಾವಯವ ಗೊಬ್ಬರಗಳನ್ನು ಹೆಚ್ಚಾಗಿ ಬಳಸಿ ರಾಸಾಯನಿಕ ಗೊಬ್ಬರದ ಪ್ರಮಾಣ ಕಡಿಮೆ ಮಾಡಬೇಕು ಎಂದು ಸಲಹೆ ನೀಡಿದರು.

ತೊಗರಿ ಬೆಳೆಯಲ್ಲಿ ಕಾಣಿಸಿಕೊಳ್ಳುವ ನೆಟೆ ರೋಗ ಮತ್ತು ಗೊಡ್ಡು ರೋಗ ನಿರ್ವಹಣೆ ಕುರಿತು ರೈತರಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಬಸವನ ಹುಳು ಮತ್ತು ಕಸ್ಪೋಟಾ ಕಳೆ ನಿಯಂತ್ರಣಕ್ಕೆ ಸಕಾಲದಲ್ಲಿ ಕ್ರಮ ತೆಗೆದುಕೊಳ್ಳದಿದ್ದರೆ ಇಳುವರಿ ನಷ್ಟ ಅನಿವಾರ್ಯ ಎಂದು ತಿಪ್ಪೇಸ್ವಾಮಿಯವರು ಹೇಳಿದರು.

ಖಜೂರಿ ಗ್ರಾಮದ ಖಜೂರಿಕೇಂದ್ರದಲ್ಲಿ ನಡೆದ ವಿಶೇಷ ಕೃಷಿ ಜಾಗೃತಿ ಅಭಿಯಾನ ದಲ್ಲಿ ಬೀಜೋಪಚಾರದ ಮಹತ್ವ ಹಾಗೂ ರಸಗೊಬ್ಬರಗಳ ಸಮತೋಲನ ಬಳಕೆ ಕುರಿತು ರೈತರಿಗೆ ವಿಸ್ತೃತ ಮಾಹಿತಿ ನೀಡಲಾಯಿತು.

ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆ ಮಣ್ಣಿನ ಫಲವತ್ತತೆ ನಾಶ ಮಾಡುತ್ತದೆ ಎಂದು ಎಚ್ಚರಿಸಿದ ಅಧಿಕಾರಿಗಳು, ಸಾರಜನಕ, ರಂಜಕ ಮತ್ತು ಪೊಟ್ಯಾಷ್ ಅನ್ನು ಮಣ್ಣು ಪರೀಕ್ಷೆ ಆಧಾರದ ಮೇಲೆ ಸಮತೋಲನವಾಗಿ ಬಳಸಬೇಕೆಂದು ಸೂಚಿಸಿದರು. ಇಫ್ಕೊ ಕಂಪನಿಯ ಅಧಿಕಾರಿಗಳು ನ್ಯಾನೋ ಯೂರಿಯಾ ಮತ್ತು ನ್ಯಾನೋ ಡಿಎಪಿ ಬಳಕೆಯ ಕುರಿತು ರೈತರಿಗೆ ಪ್ರಾತ್ಯಕ್ಷಿಕೆ ನೀಡಿ ಮಾಹಿತಿ ತಿಳಿಸಿದರು.

ಪಿಕೆಪಿಎಸ್ ಅಧ್ಯಕ್ಷ ಶರಣಪ್ಪ ಢಗೆ, ಕಾರ್ಯದರ್ಶಿ ಸಿದ್ಧರಾಮ ಆಳಂಗೆ, ಚಿತಾನಂದ ಢಗೆ, ರಮೇಶ ಶೇರಿ, ನರಸಿಂಗ ನಗರೆ, ಶಂಕರ ಢಗೆ ಸೇರಿ ಅನೇಕ ರೈತರು ಹಾಜರಿದ್ದರು.ಎಟಿಎಂ ಧನರಾಜ ಮುಲಗೆ, ಲಿಂಗಪ್ಪ ತುಪ್ಪದೊಡ್ಡಿ, ಸಿದ್ಧರಾಮ ವಾಡೆ ಹಾಜರಿದ್ದರು. ನರೋಣಾದಲ್ಲಿನ ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿ ಬಸವರಾಜ ಅಟ್ಟೂರ, ಆತ್ಮಾ ಅಧಿಕಾರಿ ಸಂಜಯ ಸೌಧಿ ಬಿಟಿಎಂ, ಹಾಗೂ ಇಫ್ಕೊ ಲಿಮಿಟೆಡ್ ಪ್ರಾದೇಶಿಕ ವ್ಯವಸ್ಥಾಪಕ ಸಿದ್ದರೂಡ ಸೇರಿ ರೈತರು ಇಲಾಖೆಯ ಸಿಬ್ಬಂದಿಗಳು ಹಾಜರಿದ್ದು ಮಾಹಿತಿ ಒದಗಿಸಿದರು.

ಅಲ್ಲದೆ ನಿಂಬಾಳ, ಮಾದನಹಿಪ್ಪರಗಾ, ಕೇರೂರ, ಗೋಳಾ ಬಿ. ರಿಕಿನ ಆಲೂರ ಇನ್ನಿತರ ಗ್ರಾಮಮಗಳಲ್ಲಿ ಕೃಷಿ ಇಲಾಖೆ ಸಿಬ್ಬಂದಿಗಳು ವಿಶೇಷ ಅಭಿಯಾನ ನಡೆದಿದೆ.

## ಮಹಾನ್ ಮಾನವತಾವಾದಿ ಜ್ಯೋತಿರಾವ್ ಪುಲೆ ಅವರ ಜೀವನ ವ್ಯಕ್ತಿತ್ವ ಮಕ್ಕಳು ಬೆಳಿಸಿಕೊಳ್ಳಲು ಕರೆ




**ಬಳ್ಳಾರಿ, ಮೇ,20–** ಮಹಾನ್ ಮಾನವತಾವಾದಿ ಜ್ಯೋತಿರಾವ್ ಫುಲೆ ಅವರ 200 ನೇಜನ ವಾರ್ಷಿಕೋತ್ಸವಸಂದರ್ಭದಲ್ಲಿ ಎಐಡಿಎಸ್‌ಓವತಿಯಿಂದ ಅಮರಾಪುರ ಗ್ರಾಮದಲ್ಲಿ ಮಕ್ಕಳ ಶಿಬಿರ ಸಂಘಟಿಸಲಾಗಿತ್ತು.ಶಿಬಿರವನ್ನು ಉದ್ದೇಶಿಸಿ ಮಾತನಾಡಿದ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಜಿಲ್ಲಾ ಮುಖಂಡರು ಹಾಗೂ ಹೋರಾಟಗಾರರಾದ ವಿದ್ಯಾ ಅವರು, ಇಂದಿನ ಸಾಮಾಜಿಕ ವಾತಾವರಣ ಮೌಲ್ಯಗಳಿಲ್ಲದೆ ಕೊಳೆತು ಹೋಗಿದೆ. ಇಂತಹ ಪರಿಸ್ಥಿತಿಯಲ್ಲಿ ಮಕ್ಕಳಿಗೆ ನಮ್ಮದೇ ದೇಶದಲ್ಲಿ ನಿಸ್ವಾರ್ಥವಾಗಿ ದೇಶಕ್ಕಾಗಿ ಜೀವ ಕೊಟ್ಟ ಮಹಾನ್ ವ್ಯಕ್ತಿಗಳ ವಿಚಾರಗಳನ್ನು ತಿಳಿಸದೆ ಬರೀ ಮಾರ್ಕ್ಸ್ ಕಾರ್ಡಗಳಲ್ಲಿ ಬರುವ ಅಂಕಿಗಳ ಹಿಂದೆ ಬಿದ್ದಿರುವುದು ವಿಪರ್ಯಾಸದ ಸಂಗತಿಯಾಗಿದೆ. ಆದ್ದ–ರಿಂದ ಮಕ್ಕಳೆಲ್ಲರೂ ಮಹಾನ್ ವ್ಯಕ್ತಿಗಳ ಹೋರಾಟದ ಬದುಕು ಮತ್ತು ಅವರು ಪಾಲಿಸಿದ ನೈತಿಕತೆ ಪರಿಚಯಿಸುವುದರಿಂದ ಮಾತ್ರ ನಿಮ್ಮಲ್ಲಿ ಸದೃಢ ವ್ಯಕ್ತಿತ್ವರೂಪಿಸಲು ಸಾಧ್ಯ, ಎಂದು ಹೇಳಿದರು.

ಶಿಬಿರದ ಮೊದಲ ಗೋಷ್ಠಿಯಲ್ಲಿ ಜ್ಯೋತಿಬಾ ಫುಲೆ ಅವರ ಜೀವನ ಕಥೆಯನ್ನು ಹೇಳುತ್ತಾ, ಅಂದು ಫುಲೆ ಅವರು ಸಾಮಾಜಿಕ ಸಂಪ್ರದಾಯದ ವಿರೋಧದ ಮಧ್ಯೆ ಹೆಣ್ಣು ಮಕ್ಕಳಿಗಾಗಿವಮತ್ತು ದಲಿತ ದಮನಿತ ಮಕ್ಕಳಿಗಾಗಿ ಶಾಲೆಯನ್ನು ತೆರೆಯದಿದ್ದರೆ, ಇಂದು ನಾವ್ಯಾರೂ ಈ ಮಟ್ಟದ ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಶಿಕ್ಷಣವು ಪ್ರತಿಯೊಬ್ಬ ವ್ಯಕ್ತಿಗೂ ಉಚಿತವಾಗಿ ಮತ್ತು ಸಮಾನವಾಗಿ ಸಿಗಬೇಕು ಎಂಬುದು ಅವರ ಆಶಯವಾಗಿತ್ತು, ಎಂದು ತಿಳಿಸಿದರು.

ಇಂದಿನ ಶಿಕ್ಷಣ ವ್ಯವಸ್ಥೆಯ ಕುರಿತು ಕಳವಳ ವ್ಯಕ್ತಪಡಿಸಿದ ಅವರು, ಒಂದೆಡೆ ಸರ್ಕಾರಗಳು ಇಂದು ಶಿಕ್ಷಣವನ್ನು ವ್ಯಾಪಾರೀಕರಣ ಮಾಡುತ್ತಿವೆ. ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಸಾವಿರಾರು ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸಿ ಮುಚ್ಚಲಾಗುತ್ತಿದೆ. ಇದು ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳನ್ನು ಶಿಕ್ಷಣದಿಂದ ವಂಚಿತರನ್ನಾಗಿ ಮಾಡುವ ಸಂಚು ಎಂದು ಹೇಳಿದರು.

ಶಿಬಿರದಲ್ಲಿ ಮನೋರಂಜನೆ ಆಟಗಳು, ಹಾಡುಗಳುಹಾಗೂ ಕ್ರಿಕೆಟ್ ಮತ್ತು ಇನ್ನಿತರ ಕ್ರೀಡೆಗಳು ಕೆಲವು ಚಟುವಟಿಕೆಗಳನ್ನು ಏರ್ಪಡಿಸಲಾಗಿತ್ತು. ಗ್ರಾಮದ ಮುಖಂಡರು ಮತ್ತು ಸಾರ್ವಜನಿಕ ಶಿಕ್ಷಣ ಸಮಿತಿಯ ನಾಗರಾಜ,ಬಸವರಾಜ, ಪಾರ್ವತಿ, ನಾಗಮ್ಮ, ಲಕ್ಷ್ಮಿ, ಸುಂಕಪ್ಪ, ಎಐಡಿಎಸ್‌ಓ ಜಿಲ್ಲಾ ಕಾರ್ಯದಲ್ಲಿ ಮಂಜುನಾಥ ಮತ್ತು ಊರಿನ ಮಕ್ಕಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ನರೇಗಾ ಯೋಜನೆ ಪುನ: ಆರಂಭಿಸಲು ಆಗ್ರಹ

**ಕಲಬುರಗಿ,ಮೇ.20–**ವಿಬಿ ಜಿ ರಾಮ್ ಜಿಯನ್ನು ಹಿಂತೆಗೆದುಕೊಂಡು ನರೇಗಾ ಯೋಜನೆಯನ್ನು ಪುನಃ ಆರಂಭಿಸಲು ಒತ್ತಾಯಿಸಿ ಎಐಕೆಕೆಎಸ್ ಜಿಲ್ಲಾ ಸಮಿತಿ ವತಿಯಿಂದ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ರಾಷ್ಟ್ರಪತಿಗಳಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಕೇಂದ್ರ ಸರ್ಕಾರವು ಹೊಸದಾಗಿ ತರುತ್ತಿರುವ ವಿಬಿ ಜಿ ರಾಮ್ ಜಿ ಯೋಜನೆಯನ್ನು ಕೈ ಬಿಟ್ಟು ನರೇಗಾ ಯೋಜನೆಯನ್ನು ಮುಂದುವರಿಸಲು ಒತ್ತಾಯಿಸಿ ಹಾಗೂ ಎರಡು ನೂರು ಮಾನವ ದಿನಗಳ ಕೆಲಸವನ್ನು ಖಾತ್ರಿಪಡಿಸಲು ಅಗ್ರಹಿಸಿ ಮತ್ತು ದಿನಕ್ಕೆ 600 ಕೂಲಿಗಾಗಿ ಒತ್ತಾಯಿಸಿ ಮನವಿ ಪತ್ರವನ್ನು ಸಲ್ಲಿಸಲಾಯಿತು.

ವಿಬಿ ಜಿ ರಾಮ್ ಜಿ ಕಾಯ್ದೆ–2025 ಅನ್ನು ಕೂಡಲೇ ವಾಪಸ್ ತೆಗೆದುಕೊಳ್ಳಬೇಕು, ನರೇಗಾ ಕೆಲಸವನ್ನು 200 ಮಾನವದಿನಗಳಿಗೆ ಹೆಚ್ಚಿಸಿ, ದಿನಕ್ಕೆ 600 ರೂ.ಕೂಲಿಯನ್ನು ಖಾತ್ರಿಪಡಿಸಬೇಕು, ರಾಜ್ಯ ಸರ್ಕಾರ ತಕ್ಷಣವೇ ಗ್ರಾಮೀಣ ಬಡಜನತೆಗೆ ಉದ್ಯೋಗ ನೀಡಲು ಕ್ರಮಗಳನ್ನು ತೆಗೆದುಕೊಳ್ಳಬೇಕು, ಕಣ್ಣಿನ ಸ್ಕ್ಯಾನಿಂಗ್ ಮಾದರಿಯನ್ನು ಕೈಬಿಟ್ಟು ಕಾರ್ಮಿಕರ ಗ್ರೂಪ್ ಫೋಟೊ ಮಾದರಿಯನ್ನು ಹಾಜರಾತಿಯ ದಾಖಲೆಯನ್ನಾಗಿ ತೆಗೆದುಕೊಳ್ಳಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷರಾದ ಗಣಪತ ರಾವ್ ಕೆ. ಮಾನೆ,




ಕಾರ್ಯದರ್ಶಿಗಳಾದ ಮಹೇಶ್ ಎಸ್. ಬಿ. ಜಿಲ್ಲಾ ನಾಯಕರುಗಳಾದ ವಿಶ್ವನಾಥ್ ಸಿಂಗೆ, ನೀಲಕಂಠ ಹುಲಿ, ಭೀಮು ಆಂದೋಲ, ಸಾಬಣ್ಣ ಸುಣಗಾರ, ಚೌಡಪ್ಪ ಗಂಜಿ, ಶರಣಪ್ಪ ಕಾಂಬಳೆ, ಸುರೇಶ ಭೀಮಳ್ಳಿ ಹಾಗೂ ಇತರರು ಉಪಸ್ಥಿತರಿದ್ದರು.

## ಪ್ರಧಾನ ಮಂತ್ರಿ ಆವಾಸ್ ಯೋಜನೆ ಮನೆ ಕಾಮಗಾರಿ ಅಪೂರ್ಣ: ಫಲಾನುಭವಿಯಿಂದ ಸಹಾಯಕ ಆಯುಕ್ತರಿಗೆ ದೂರು



**ಕಲಬುರಗಿ:ಮೇ.20:** 2018–19ನೇ ಸಾಲಿನ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮಂಜೂರಾದ ಮನೆ ಇನ್ನೂ ಪೂರ್ಣಗೊಳ್ಳದೇ ಇರುವ ಕುರಿತು ಫಲಾನುಭವಿ ಪ್ರಶಾಂತ ತಂದೆ ಭೀಮರಾವ ಅವರು ಸಹಾಯಕ ಆಯುಕ್ತರಿಗೆ ಅವರಿಗೆ ದೂರು ಸಲ್ಲಿಸಿದ್ದಾರೆ.

ತಾರಫೈಲ್ 13ನೇ ಕ್ರಾಸ್ ನಿವಾಸಿಯಾಗಿರುವ ರೇಣುಕಾ ಗಂಡ ಪ್ರಶಾಂತ ಅವರ ಹೆಸರಿನಲ್ಲಿ ಯೋಜನೆಯಡಿ ಮನೆ ಮಂಜೂರಾಗಿದ್ದು, ಡಿ.ಡಿ ಕೂಡ ಪಾವತಿಸಲಾಗಿದೆ ಎಂದು ತಿಳಿಸಿದ್ದಾರೆ. ಆದರೆ ಮನೆ ಕಾಮಗಾರಿ ಕೇವಲ ಬೇಸಮೆಂಟ್ ಹಂತದಲ್ಲೇ ನಿಂತಿದ್ದು, 18.05.2026 ರವರೆಗೆ ಪೂರ್ಣಗೊಳಿಸಿಲ್ಲ ಎಂದು ಆರೋಪಿಸಿದ್ದಾರೆ.

ಈ ಕುರಿತು ಹಲವು ಬಾರಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧಿಕಾರಿಗಳನ್ನು ಸಂಪರ್ಕಿಸಿದಾಗ "ಶೀಘ್ರದಲ್ಲೇ ಮನೆ ಪೂರ್ಣಗೊಳಿಸುತ್ತೇವೆ" ಎಂದು ಸುಳ್ಳು ಭರವಸೆ ನೀಡುತ್ತಾ ಬಂದಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಮಾಹಿತಿ ಹಕ್ಕು ಕಾಯ್ದೆಯಡಿ ಕೇಳಿದ ಮಾಹಿತಿಗೆ ಅಧಿಕಾರಿಗಳು ಬೇರೆ ಮನೆಯ ಛಾಯಾಚಿತ್ರವನ್ನು ನೀಡಿ "ಮನೆ ಪೂರ್ಣಗೊಂಡಿದೆ" ಎಂದು ಮಾಹಿತಿ ನೀಡಿರುವುದು ಗಂಭೀರ ಅಕ್ರಮವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಇದೇ ವೇಳೆ, 350 ಮನೆಗಳ ಕಾಮಗಾರಿ ಸಂಪೂರ್ಣಗೊಂಡಿದೆ ಎಂದು ತೋರಿಸಿ ಗುತ್ತಿಗೆದಾರರು ಸಂಪೂರ್ಣ ಬಿಲ್ ಪಡೆದುಕೊಂಡಿದ್ದಾರೆ. ಆದರೆ ವಾಸ್ತವದಲ್ಲಿ ಅನೇಕ ಮನೆಗಳು ಅಪೂರ್ಣವಾಗಿದ್ದು, ಫಲಾನುಭವಿಗಳಿಗೆ ಮೋಸವಾಗುತ್ತಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ದಿನಾಂಕ 05.05.2026 ರಂದು ಸಹಾಯಕ ಆಯುಕ್ತರು ಸ್ವತಃ ಸ್ಥಳ ಪರಿಶೀಲನೆ ನಡೆಸಿ, ಎರಡು–ಮೂರು ದಿನಗಳಲ್ಲಿ ಕಾಮಗಾರಿ ಆರಂಭವಾಗಲಿದೆ ಎಂದು ಭರವಸೆ ನೀಡಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಪ್ರಶಾಂತ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆದ್ದರಿಂದ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮಂಜೂರಾದ ಮನೆ ತಕ್ಷಣ ಪೂರ್ಣಗೊಳಿಸಿ, ತಪ್ಪು ಮಾಹಿತಿ ನೀಡಿದ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಗುತ್ತಿಗೆದಾರರ ವಿರುದ್ಧ ಕಾನೂನು ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಸುರೇಶ ಇಟಗಿ, ಗುಂಡೇಶ ಶಿವನೂರ, ದೇವೇಂದ್ರ ಕವಳೇಕಾರ, ದತ್ತು ಹೈಯಾಳಕರ್ ಇದ್ದರು.

## ಸಿಯೋಲ್ ನಲ್ಲಿ ಭಾರತ ದಿನಾಚರಣೆ ಸಂಭ್ರಮ: ಕೊರಿಯಾ ಕನ್ನಡ ಕೂಟದ ಮೆರಗು



**ಬಳ್ಳಾರಿ.ಮೇ.20**–ದಕ್ಷಿಣ ಕೊರಿಯಾದ ಸಿಯೋಲ್ ನ ಯೋಯಿದೋ ಹಾಂಗಾಂಗ್ ಪಾರ್ಕ್ (Yeouido Hangang Park) ನಲ್ಲಿ ಭಾರತೀಯ ರಾಯಭಾರ ಕಚೇರಿ ಆಯೋಜಿಸಿದ್ದ "ಭಾರತ ದಿನಾಚರಣೆ–2026 (2026 India day)" ಕಾರ್ಯಕ್ರಮವು ವಿದೇಶಿ ನೆಲದಲ್ಲಿ ಭಾರತೀಯ ಸಂಸ್ಕೃತಿಯ ಸುವಾಸನೆ ಹರಡಿಸಿದ ಸಂಭ್ರಮವಾಗಿ ಮೂಡಿಬಂದಿತು. ಬೆಳಿಗ್ಗೆಯಿಂದ ಸಂಜೆವರೆಗೆ ದಿನಪೂರ್ತಿ ನಡೆದ ಈ ಕಾರ್ಯಕ್ರಮದಲ್ಲಿ ಭಾರತದೆಲ್ಲೆಡೆಯ ಸಂಸ್ಕೃತಿ, ಪರಂಪರೆ, ಹಾಗೂ ಕಲೆಗಳ ವೈವಿಧ್ಯತೆ ಮನಮುಟ್ಟುವ ರೀತಿಯಲ್ಲಿ ಅನಾವರಣಗೊಂಡಿತು.

ಕಾರ್ಯಕ್ರಮಕ್ಕೆ ಭಾರತೀಯ ರಾಯಭಾರಿ ಗೌರಂಗಲಾಲ್ ದಾಸ್ ಉದ್ಘಾಟನಾ ಮಾತುಗಳನ್ನಾಡಿ ಚಾಲನೆ ನೀಡಿದರು. ನಂತರ ದಿನವಿಡೀ ಭರತನಾಟ್ಯ, ಒಡಿಸ್ಸಿ, ಕಥಕ್ ಸೇರಿದಂತೆ ವಿವಿಧ ಶಾಸ್ತ್ರೀಯ ನೃತ್ಯಗಳು, ಯೋಗ ಪ್ರದರ್ಶನಗಳು ಮತ್ತು ಸಂಗೀತ ಕಾರ್ಯಕ್ರಮಗಳು ಪ್ರೇಕ್ಷಕರನ್ನು ರಂಜಿಸಿದವು.

ವಿವಿಧ ಭಾರತೀಯ ಸಮುದಾಯದ ಸದಸ್ಯರು ಭಾಗವಹಿಸಿ ನೃತ್ಯ, ಸಂಗೀತ, ಯೋಗ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ನಡೆಸಿದರು. ಭಾರತೀಯ ಸಮುದಾಯದ ಜೊತೆಗೆ ಕೊರಿಯಾದ ಸ್ಥಳೀಯರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು. ಇದರಲ್ಲಿ ಕೊರಿಯಾ ಕನ್ನಡ ಕೂಟ (ಏಏಏ) ವು ಅತ್ಯಂತ ಉತ್ಸಾಹ ಮತ್ತು ಜವಾಬ್ದಾರಿ ಯಿಂದ ಭಾಗವಹಿಸಿ ತನ್ನ ಸಾಂಸ್ಕೃತಿಕ ಪ್ರದರ್ಶನಗಳ ಮೂಲಕ ಪ್ರೇಕ್ಷಕರ ಮೆಚ್ಚುಗೆ ಗಳಿಸಿತು.

ಸೌತ್ ಜೋನ್ ನ ಕರ್ನಾಟಕ ಭೂತ್ ನಲ್ಲಿ ರಾಜ್ಯದ ಸಾಂಸ್ಕೃತಿಕ ವೈಭವವನ್ನು ಪರಿಚಯಿಸುವ ಹಲವು ವಸ್ತುಗಳನ್ನು ಮನಮೋಹಕವಾಗಿ ಪ್ರದರ್ಶಿಸಲಾಗಿತ್ತು. ಬಸವಣ್ಣರಂತಹ ಮಹಾನ್ ಚಿಂತಕರ ಪ್ರತಿರೂಪಗಳು (3D images), , ಮೈಸೂರು ಅರಮನೆ, ಅಂಬಾರಿ, ಗೋಲ್ಗುಂಬಜ್, ಬೇಲೂರು ಹಳೇಬೀಡು ಶಿಲ್ಪಕಲೆ, ಹಂಪಿಯ ಕಲ್ಲಿನ ರಥ ಇತ್ಯಾದಿ ಪ್ರಮುಖ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪ್ರತೀಕಗಳು ಗಮನ ಸೆಳೆದವು. ಜೊತೆಗೆ ಮೈಸೂರು ಸಿಲ್ಕ್, ಇಲ್ಕಲ್ ಸೀರೆಗಳು ಹಾಗೂ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಪರಿಚಯವು ಕರ್ನಾಟಕದ ಶ್ರೀಮಂತ ಪರಂಪರೆಯನ್ನು ಪ್ರತಿಬಿಂಬಿಸಿತು. ಕುವೆಂಪು, ತೇಜಸ್ವಿ, ಶಿವರಾಮ ಕಾರಂತ್ ಮೊದಲಾದ ಮಹನೀಯರ ಕೃತಿಗಳನ್ನು ಪರಿಚಯಿಸುವ ಪುಸ್ತಕಗಳನ್ನೂ ಪ್ರದರ್ಶಿಸಲಾಗಿತ್ತು. ಆನೆಗಳ ಪ್ರತಿರೂಪಗಳು ಮಳಿಗೆಗೆ ಮತ್ತಷ್ಟು ಆಕರ್ಷಣೆಯನ್ನು ತಂದವು.

ಕೊರಿಯಾ ಕನ್ನಡ ಕೂಟ (kkk) ವತಿಯಿಂದ ರಮ್ಯಾ ಗೌಡ ನೇತೃತ್ವದಲ್ಲಿ ಮೂಡಿಬಂದ ಕರ್ನಾಟಕದ ಜನಪದ ನೃತ್ಯ 'ಕೋಲಾಟ'ವು ಉತ್ಸಾಹಭರಿತವಾಗಿ ಪ್ರೇಕ್ಷಕರನ್ನು ರಂಜಿಸಿತು. ಅಧ್ಯಂತ್ ನರಹರಿ ಉಪಾಧ್ಯ ಅವರ ಫ್ಲೂಟ್ ರೆಸೈಟಲ್ ಕಾರ್ಯಕ್ರಮಕ್ಕೆ ಶಾಂತಮಯ ಸ್ಪರ್ಶ ನೀಡಿದರೆ, ಕ್ತ ಉಪಾಧ್ಯ ಅವರ ಭರತನಾಟ್ಯ ಪ್ರದರ್ಶನ ಶೈಲಿ ಮತ್ತು ಭಾವಾಭಿವ್ಯಕ್ತಿಯಿಂದ ವಿಶೇಷವಾಗಿ ಮೆಚ್ಚುಗೆಗೆ ಪಾತ್ರವಾಯಿತು.

# ಮೇ 22 ರಿಂದ ಪಿಡಿಎ ಇಂಜನಿಯರಿಂಗ್ ಕಾಲೇಜಿನಲ್ಲಿತಾಂತ್ರಿಕ,ಸಾಂಸ್ಕೃತಿಕ ಉತ್ಸವ–ನಿರ್ಮಾಣ 2026



**ಕಲಬುರಗಿ,ಮೇ 20:** ಪಿ.ಡಿ.ಎ. ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮೇ. 22 ಮತ್ತು 23 ರಂದು ಎರಡು ದಿನಗಳ ವಿದ್ಯಾರ್ಥಿಗಳ ತಾಂತ್ರಿಕ ಮತ್ತು ಸಾಂಸ್ಕೃತಿಕ ಉತ್ಸವ "ನಿರ್ಮಾಣ–2026" ನ್ನು ಆಯೋಜಿಸಲಾಗಿದೆ ಎಂದು ಹೈ.ಕ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಶೀಲ ನಮೋಶಿ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು

22 ರಂದು ಬೆಳಿಗ್ಗೆ 10 ಗಂಟೆಗೆ, ಮಹಾವಿದ್ಯಾಲಯದ "ಪಿಡಿಎ ಆಡಿಟೋರಿಯಂ", ವಿದ್ಯಾರ್ಥಿ ಚಟುವಟಿಕೆ ಕೇಂದ್ರದಲ್ಲಿ ಉದ್ಘಾಟನೆ ನೆರವೇರಿಸಲಾಗುವುದು. ಈ ಉತ್ಸವದಲ್ಲಿ ವಿದ್ಯಾರ್ಥಿಗಳು ಪಾಲ್ಗೊಂಡು ತಮ್ಮ ವಿವಿಧ ತಾಂತ್ರಿಕ ಮತ್ತು ಸಾಂಸ್ಕೃತಿಕ ಕೌಶಲ್ಯಗಳನ್ನು ಪ್ರದರ್ಶಿಸುವರು.

ಉತ್ಸವದ ಉದ್ಘಾಟಕರಾಗಿ ಉಪ ಪೊಲೀಸ ಆಯುಕ್ತರಾದ ಶಾಲೂ ಅವರು ಮುಖ್ಯ ಅತಿಥಿಗಳಾಗಿ ಆಗಮಿಸುವರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಮತ್ತು ವಿಧಾನ ಪರಿಷತ ಸದಸ್ಯ ಶಶೀಲ ಜಿ. ನಮೋಶಿ ಅವರು ವಹಿಸುವರು. ಗೌರವ ಅತಿಥಿಗಳಾಗಿ ಬೆಂಗಳೂರು ಮೂಲದ ಇನಫಿನಾನ್ ಟೆಕ್ನಾಲಜಿಯ ಹಿರಿಯ ಪ್ರಮುಖ ಇಂಜಿನಿಯರ ಹಾಗೂ ಹಿರಿಯ ನಿರ್ದೇಶಕ ಮತ್ತು ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿ ಡಾ. ಪ್ರಕಾಶ ಬಾಲಸುಬ್ರಮಣಿಯನ್, ಉಪಾಧ್ಯಕ್ಷ ರಾಜಾ ಭೀಮಳ್ಳಿ, ಕಾರ್ಯದರ್ಶಿ ಉದಯಕುಮಾರ ಚಿಂಚೋಳಿ, ಜಂಟಿ ಕಾರ್ಯದರ್ಶಿ ಡಾ. ಕೈಲಾಶ ಪಾಟೀಲ, ಮಹಾವಿದ್ಯಾಲದ ಆಡಳಿತ ಮಂಡಳಿಯ ಸದಸ್ಯರಾದ ಅರುಣಕುಮಾರ ಎಮ್. ಪಾಟೀಲ, ಡಾ. ಶರಣಬಸಪ್ಪ ಆರ್. ಹರವಾಳ, ಡಾ. ಅನೀಲಕುಮಾರ ಬಿ. ಪಟ್ಟಣ, ಡಾ. ರಜನೀಶ ವಾಲಿ, ಹಾಗೂ ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿರುವರು.

ಎರಡು ದಿನಗಳ ತಾಂತ್ರಿಕ ಮತ್ತು ಸಾಂಸ್ಕೃತಿಕ ಉತ್ಸವದಲ್ಲಿ ಟೆಕ್ನೋವಿಷನ ಅಡಿಯಲ್ಲಿ ವಿವಿಧ ತಾಂತ್ರಿಕಸ್ಪರ್ಧೆಗಳಾದ 12 12 ಗಂಟೆಗಳ ಕಾಲದ ಕೋಡ್ ಎಕ್ಸರೇಟ್, ಸ್ಪೀಕ್ ಟ್ಯಾಕೂಲಾರ, ಸ್ಲೈಡ್ ಎನ್ ಸರವೈವ್, ಟೆಕ್ ಆಕ್ಸನ್ ವಾರ್ಸ್, ಏರ್ಪಡಿಸಿದ್ದು ಇದರಲ್ಲಿ ಕಲ್ಯಾಣ ಕರ್ನಾಟಕದ ವಿವಿಧ ತಾಂತ್ರಿಕ ಮಹವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸುವರು. ವಿವಿಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ನೀಡಲಾಗುವುದು. ಅದೇ ದಿನ ಸಾಯಂಕಾಲ 7 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎರಡು ದಿನಗಳ ಕಾಲ ನಡೆಯುವ ಈ ತಾಂತ್ರಿಕ ಮತ್ತು ಸಾಂಸ್ಕೃತಿಕ ಸಮ್ಮಿಲನದ ಹಬ್ಬವು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮೂಡಿಸುವ ಹಾಗೂ ಅವರಲ್ಲಿರುವ ಪ್ರತಿಭೆಯನ್ನು ಹೊರಹಾಕುವ ವೇದಿಕೆಯಾಗಿ ಪರಿಣಮಿಸುವುದು.

ಈ ಉತ್ಸವದಲ್ಲಿ ವಿದ್ಯಾರ್ಥಿಗಳ ತಾಂತ್ರಿಕ, ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕಗಳು ನಡೆಯಲ್ಲಿದ್ದು, ಈ ಭಾಗದ ವಿವಿಧ ತಾಂತ್ರಿಕ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸುವರು. ಈ ಉತ್ಸವದಲ್ಲಿ ನೃತ್ಯ, ಗಾಯನ, ವಾಲಿಬಾಲ, ಫುಟಬಾಲ್, ಗಲ್ಲಿ ಕ್ರಿಕೇಟ, ಹಾಗೂ ಮುಂತಾದವುಗಳು ಜರುಗುವುವು.

22 ರಂದು ಬೆಳಿಗ್ಗೆ 6ಗಂಟೆಗೆ ನಿರ್ಮಾಣ ಉತ್ಸವದ ಅಂಗವಾಗಿ ಮ್ಯಾರಾಥಾನ ಹಮ್ಮಿಕೊಳ್ಳಲಾಗಿದೆ.ಈ ಮ್ಯಾರಾಥಾನ ವಿಕಾಸ ಸೌಧದಿಂದ ಪ್ರಾರಂಭಗೊಂಡು ಸರದಾರ ವಲ್ಲಭಾಯಿ ವೃತ್ತದ ಮುಖಾಂತರ ಪಿ.ಡಿ.ಎ. ಕಾಲೇಜು ತಲುಪುವುದು.

ಉತ್ಸವ ನಿರ್ವಹಣೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್. ಆರ್. ಪಾಟೀಲ ಮತ್ತು ಉಪಪ್ರಾಚಾರ್ಯರುಗಳಾದ ಡಾ. ಎಸ್. ಆರ್. ಹೊಟ್ಟಿ ಮತ್ತು ಡಾ. ಭಾರತಿ ಹರಸೂರು ಅವರು ನಿರ್ವಹಿಸುವರು. ಉತ್ಸವದ ಸಂಯೋಜಕರಾಗಿ ಪ್ರೊ. ಜಯಪ್ರಕಾಶ ಎ. ಕೆ. ಅವರು ವಹಿಸುವರು. ಸಂಚಾಲಕರಾಗಿ ಪ್ರೊ. ಶಿವರಾಜ ಕೆ. ಇಂಗನಕಲ್, ಪ್ರೊ. ಮಲ್ಲಿಕಾರ್ಜುನ ಬಿಜಾಪೂರ, ಡಾ. ಸುಜಾತಾ ಡಿ. ಪಾಟೀಲ, ಡಾ. ಸೌಮ್ಯ ಪೆದ್ದಿ, ಪ್ರೊ. ಅಕ್ಷಯ ಆಸ್ಪಳ್ಳಿ ಹಾಗೂ ಪ್ರೊ. ಅಶ್ವಿನಿ ಹತ್ತಿ ಅವರು ವಹಿಸಿಕೊಳ್ಳುವರು.ಟೆಕ್ನೋವಿಷನ್ ಸಂಚಾಲಕರಾಗಿ ಡಾ. ಪವನ ರಂಗದಾಳ ಹಾಗೂ ಡಾ. ರಾಕೇಶ ಹುಡೆದ ಅವರು ತಮ್ಮ ಕಾರ್ಯವನ್ನು ನಿರ್ವಹಿಸುವರು. ವಿದ್ಯಾರ್ಥಿ ಸಂಚಾಲಕರಾಗಿ ತಿಪ್ಪಣ್ಣ ನಾಟೀಕಾರ್ ಮತ್ತು ಪ್ರೀತ ಮೇಹತಾ ಅವರನ್ನು ನೇಮಿಸಿಲಾಗಿದೆ ಎಂದು ವಿವರಿಸಿದರು.

# ಅಷ್ಟಗಾ ಗ್ರಾಮದಲ್ಲಿ ರೂ.4.50 ಕೋಟಿ ರಸ್ತೆ ಕಾಮಗಾರಿಗೆ ಶಾಸಕ ಬಸವರಾಜ ಬಿ. ಮತ್ತಿಮಡು ಭೂಮಿ ಪೂಜೆ



**ಕಲಬುರಗಿ:ಮೇ.20:** 2024–25ನೇ ಸಾಲಿನ ಅತಿವೃಷ್ಟಿ ಹಾಗೂ ನೆರೆಹಾವಳಿ ಅನುದಾನದಡಿ ಕಲಬುರಗಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಅಷ್ಟಗಾ ಗ್ರಾಮದಿಂದ ಸೈಯದ ಚಿಂಚೋಳಿ ಹಾಗೂ ನರೋಣಾ ಮುಖ್ಯ ರಸ್ತೆಯ ಅಭಿವೃದ್ಧಿ ಕಾಮಗಾರಿಗೆ ಸುಮಾರು ರೂ.4.50 ಕೋಟಿ ವೆಚ್ಚದಲ್ಲಿ ಭೂಮಿ ಪೂಜೆ ನೆರವೇರಿತು. ಜೊತೆಗೆ ಸುಮಾರು ರೂ.1 ಕೋಟಿ ಅನುದಾನದಲ್ಲಿ ಸೇತುವೆ ನಿರ್ಮಾಣ ಹಾಗೂ ರೂ.50 ಲಕ್ಷ ವೆಚ್ಚದಲ್ಲಿ ಹನುಮಾನ್, ಹಿರೋಡೇಶ್ವರ ಮತ್ತು ಸಿದ್ದಾರೂಢ ದೇವಸ್ಥಾನಗಳ ಜೀರ್ಣೋದ್ಧಾರ ಕಾಮಗಾರಿಗಳಿಗೂ ಚಾಲನೆ ನೀಡಲಾಯಿತು.

ಕಲಬುರಗಿ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಬಿ. ಮತ್ತಿಮಡು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಗ್ರಾಮೀಣ ಭಾಗದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಹಲವು ವರ್ಷಗಳಿಂದ ರಸ್ತೆ ಸಮಸ್ಯೆಯಿಂದ ಬಳಲುತ್ತಿದ್ದ ಜನರಿಗೆ ಇದೀಗ ಉತ್ತಮ ಗುಣಮಟ್ಟದ ರಸ್ತೆ ಸೌಲಭ್ಯ ದೊರೆಯಲಿದೆ ಎಂದರು. ಈ ರಸ್ತೆ ಅಭಿವೃದ್ಧಿಯಿಂದ ರೈತರು, ವಿದ್ಯಾರ್ಥಿಗಳು ಹಾಗೂ ವಾಹನ ಸವಾರರಿಗೆ ಹೆಚ್ಚಿನ ಅನುಕೂಲವಾಗಲಿದ್ದು, ಗ್ರಾಮೀಣ ಸಂಪರ್ಕ ವ್ಯವಸ್ಥೆ ಮತ್ತಷ್ಟು ಬಲವಾಗಲಿದೆ ಎಂದು ಹೇಳಿದರು.

ಅತಿವೃಷ್ಟಿಯಿಂದ ಹಾನಿಗೊಳಗಾದ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಸರ್ಕಾರ ವಿಶೇಷ ಅನುದಾನ ಬಿಡುಗಡೆ ಮಾಡಿದ್ದು, ಈ ಯೋಜನೆಯಡಿ ಅಷ್ಟಗಾ, ಸೈಯದ ಚಿಂಚೋಳಿ ಹಾಗೂ ನರೋಣಾ ಭಾಗಗಳ ವ್ಯಾಪಾರ, ಸಂಚಾರ ಮತ್ತು ಕೃಷಿ ಚಟುವಟಿಕೆಗಳಿಗೆ ಉತ್ತೇಜನ ಸಿಗುವ ನಿರೀಕ್ಷೆ ವ್ಯಕ್ತವಾಗಿದೆ.

ಕಾರ್ಯಕ್ರಮದಲ್ಲಿ ಗ್ರಾಮೀಣ ಮಂಡಲ ಅಧ್ಯಕ್ಷ ಗಂಗಪ್ಪಗೌಡ ಪಾಟೀಲ್ ಬೋಧನ್, ಶರಣಬಸಪ್ಪ ಬಿ. ಪಾಟೀಲ್ ಅಷ್ಟಗಾ, ಶಿವಕುಮಾರ್ ಪಾಟೀಲ್ ಜಂಬಗಾ, ಶಿವಪುತ್ರಪ್ಪ ಹತಗುಂದಿ, ಹೇಮಂತರಾವ್ ರೇವಣಿ ಕಹಂಗರಗ, ಗಿರಿರಾಜ್ ಬಿರಾದಾರ್, ಶರಣಬಸಪ್ಪ ಪಾಟೀಲ್, ಶರಣಬಸಪ್ಪ ಬಿರಾದಾರ್, ದೀಪಕ್ ಸಲಗರ್, ಗೋಪಾಲರಾವ್ ಶಾಸ್ತ್ರಿ, ದೇವಿಂದ್ರಪ್ಪ ಪಾಟೀಲ್, ಅರುಣಕುಮಾರ್ ಬೆನಕನಹಳ್ಳಿ, ಅಶೋಕ್ ಬಿರಾದಾರ್, ಮಹದೇವ ಶಿವಕೇರಿ ಸೇರಿದಂತೆ ಕ್ಷೇತ್ರದ ಮುಖಂಡರು, ಗ್ರಾಮಸ್ಥರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಸಹಕಾರ ಇಲಾಖೆ ಅಧಿಕಾರಿಗಳಿಗೆ ರಾಜ್ಯಮಟ್ಟದ ವಿಶೇಷ ತರಬೇತಿ



**ಬೀದರ,ಮೇ 20:** ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳ,ಬೀದರ ಜಿಲ್ಲಾ ಸಹಕಾರ ಯೂನಿಯನ್ ಮತ್ತು ಸಹಕಾರ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಬೀದರ ಕಲಬುರಗಿ ಮತ್ತು ಯಾದಗಿರ ಜಿಲ್ಲೆಯ ಸಹಕಾರ ಇಲಾಖೆಯ ಹಿರಿಯ ಮತ್ತು ಕಿರಿಯ ಅಧಿಕಾರಿಗಳಿಗೆ ಒಂದು ದಿನದ ರಾಜ್ಯಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮದ ಶಿಬಿರವನ್ನು ಬೀದರ ಮನ್ನಾಏಖೆಳಿ ರಸ್ತೆ ವಿಂಟೇಜ ರಿಟ್ರಿಟ್ ರೆಸಾರ್ಟ ಕಾಡವಾದ ಹತ್ತಿರ ಚಟನಳಿದಲ್ಲಿ ಜರಗಿಸಲಾಯಿತು

ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ ಅಧ್ಯಕ್ಷ ಅಮರಕುಮಾರ ಬಿ. ಖಂಡ್ರೆ ಅವರು ನೆರವೇರಿಸಿದರು. ಪ್ರಾಸ್ತಾವಿಕವಾಗಿ ಸಹಕಾರ ಸಂಘಗಳ ಜಂಟಿ ನಿಬಂಧಕ ವಿಶ್ವನಾಥ ಮಲಕೂಡ ಅವರು ಮಾತನಾಡಿದರು. ಕರ್ನಾಟಕ ರಾಜ್ಯ ಸಹಕಾರ ಮಹಿಳಾ ಮಹಾಮಂಡಳ ಅಧ್ಯಕ್ಷರಾದ ಶಕುಂತಲಾ ಕಾಶಿನಾಥ ಬೆಲ್ದಾಳೆ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಅಭಿಶೇಕ ಆರ್ ಪಾಟೀಲ, ಅವರು ಮಾತನಾಡುತ್ತಾ ಸಹಕಾರ ಸಂಘಗಳಲ್ಲಿ ಬದಲಾವಣೆಯಾದ ಕಾಯಿದೆ ಅಂಶಗಳ ಬಗ್ಗೆ ಕೂಲಂಕುಷವಾಗಿ ಈ ತರಬೇತಿಯಲ್ಲಿ ತಿಳಿಸುತ್ತಾರೆ. ತರಬೇತಿಯಲ್ಲಿ ಅರ್ಥವಾಗದೆ ಇರುವಂತಹ ವಿಷಗಳನ್ನು ಉಪನ್ಯಾಸದ ಸಮಯದಲ್ಲಿ ಉಪನ್ಯಾಸಕರೊಂದಿಗೆ ಚರ್ಚಿಸಿ ಹೆಚ್ಚಿನ ಮಾಹಿತಿ ಪಡೆಯಿರಿ. ಮಾಹಿತಿಗಳನ್ನು ಪಡೆದು ಪಾರದರ್ಶಕವಾಗಿ ಕೆಲಸ ನಿರ್ವಹಿಸಿಕೊಂಡು ಹೋಗಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬೀದರ ಜಿಲ್ಲಾ ಸಹಕಾರ ಯೂನಿಯನ್ನಿನ ನಿರ್ದೇಶಕರುಗಳಾದ ವೀರೇಶ ತೂಗಾಂವ, ಶ್ರೀ ದಯಾನಂದ ಜಿ. ಪವನ ವಿಶ್ವಂಬರರಾವ, ಮಲ್ಲಿಕಾರ್ಜುನ ಪಾಂಚಳ ಕಿರಾಣಕುಮಾರ ಕಾಮಶೇಟ್ಟಿ ಕಿರಾಣಕುಮಾರ ಪಾಟೇಲ್ ಐ. ಎಸ್. ಗಿರಡ್ಡಿ, ಡಾ. ಗುರುಸ್ವಾಮಿ.ಶಶಿಶೇಖರ ರೆಡ್ಡಿ, ಮಂಜುಳಾ ಎಸ್, ಡಾ.ನೀಲಾಂಬಿಕಾ ಹಾಗೂ ಸಹಕಾರ ಇಲಾಖೆಯ ಅಧಿಕಾರಿಗಳು ಯೂನಿಯನ್ನಿನ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಿರೂಪಣೆ ಮತ್ತು ಸ್ವಾಗತ ಸುಬ್ರಮಣ್ಯ ಪ್ರಭು (ನಿರ್ದೇಶಕರು, ಸಹಾರ್ದ ತರಬೇತಿ ಕೇಂದ್ರ, ಡಿ.ಸಿ.ಸಿ ಬ್ಯಾಂಕ್ ನೌಬಾದ,) ನಡೆಸಿಕೊಟ್ಟರೆ, ವಿಶ್ವನಾಥ ಮಲಕೂಡ (ಸಹಕಾರ ಸಂಘಗಳ ಜಂಟಿ ನಿಬಂಧಕರು ಕಲಬುರಗಿ ಪ್ರಾಂತ) ವಂದನಾರ್ಪಣೆ ಮಾಡಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE